# ಪ್ರಶಂಸನೀಯ ಕ್ರೀಡಾಪಟುಗಳಿಂದ ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್) ಮತ್ತು ಪೊಲೀಸ್ ಸಬ್-ಇನ್ಸ್‌ಪೆಕ್ಟರ್ (ಸಿವಿಲ್) (ಪುರುಷ & ಮಹಿಳಾ) ಹಾಗೂ ಸೇವೆಯಲ್ಲಿರುವವರ ಮಿಕ್ಕುಳಿದ ವೃಂದದ ಮತ್ತು ಕಲ್ಯಾಣ-ಕರ್ನಾಟಕ ಪ್ರದೇಶದ ಸ್ಥಳೀಯ ಸೇವಾನಿರತ ಹುದ್ದೆಗಳಿಗೆ ಸಂಬಂಧಿಸಿದಂತೆ ಅಭ್ಯರ್ಥಿಗಳು ಕೇಳಬಹುದಾದಂತಹ ಪ್ರಶ್ನೆಗಳು

**ಅಧಿಸೂಚನೆ ಸಂಖ್ಯೆ: 15/ನೇಮಕಾತಿ-2/2021-22.**

**ಒಟ್ಟು ಹುದ್ದೆಗಳು: 80+20.**

| ವಿವರಗಳು | ದಿನಾಂಕ |
|---|---|
| ಆನ್‌ಲೈನ್ ಅರ್ಜಿ ಸಲ್ಲಿಸಲು ಪ್ರಾರಂಭವಾಗುವ ದಿನಾಂಕ | 31/08/2021 |
| ಆನ್‌ಲೈನ್ ಅರ್ಜಿ ಸೃಜಿಸಲು ಕೊನೆಯ ದಿನಾಂಕ | 29/09/2021 |
| ಆನ್‌ಲೈನ್ ಅರ್ಜಿ ಶುಲ್ಕ ಪಾವತಿಸಲು ಕೊನೆಯ ದಿನಾಂಕ | 01/10/2021 |

1) ಪಿಎಸ್‌ಐ (ಸಿವಿಲ್) (ಪುರುಷ ಮತ್ತು ಮಹಿಳಾ) ಹುದ್ದೆಗೆ ನಿಗದಿಪಡಿಸಲಾಗಿರುವ ಕನಿಷ್ಠ ವಯೋಮಿತಿ ಎಷ್ಟು ?

ಉ: ವೃಂದ ಮತ್ತು ನೇಮಕಾತಿ ತಿದ್ದುಪಡಿ ನಿಯಮ, 2009 ಮತ್ತು 2014 ರ ಪ್ರಕಾರ ಪೊಲೀಸ್ ಸಬ್-ಇನ್ಸ್‌ಪೆಕ್ಟರ್ (ನಾಗರಿಕ) (ಪುರುಷ ಮತ್ತು ಮಹಿಳಾ) ಹುದ್ದೆಗೆ ವಯೋಮಿತಿಯು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಲಾಗಿರುವ ಕೊನೆಯ ದಿನಾಂಕಕ್ಕೆ ಅಂದರೆ **29.09.2021** ಕ್ಕೆ ಕನಿಷ್ಠ 21 ವರ್ಷ ತುಂಬಿರಬೇಕು.

2) ಪಿಎಸ್‌ಐ (ಸಿವಿಲ್) (ಪುರುಷ ಮತ್ತು ಮಹಿಳಾ) ಹುದ್ದೆಗೆ ನಿಗದಿಪಡಿಸಲಾಗಿರುವ ಗರಿಷ್ಠ ವಯೋಮಿತಿ ಎಷ್ಟು?

ಉ: ವೃಂದ ಮತ್ತು ನೇಮಕಾತಿ ತಿದ್ದುಪಡಿ ನಿಯಮ, 2009 ಮತ್ತು 2014ರ ಪ್ರಕಾರ ಪೊಲೀಸ್ ಸಬ್-ಇನ್ಸ್‌ಪೆಕ್ಟರ್ (ನಾಗರಿಕ) (ಪುರುಷ ಮತ್ತು ಮಹಿಳಾ) ಹುದ್ದೆಗೆ ಗರಿಷ್ಠ ವಯೋಮಿತಿಯು 29**.09.2021** ಕ್ಕೆ ಸಾಮಾನ್ಯ ವರ್ಗಕ್ಕೆ ಸೇರಿದ ಅಭ್ಯರ್ಥಿಗಳಿಗೆ ಗರಿಷ್ಠ 30 ವರ್ಷ ಹಾಗೂ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಇತರೆ ಹಿಂದುಳಿದ ವರ್ಗಕ್ಕೆ ಸೇರಿದ ಅಭ್ಯರ್ಥಿಗಳಿಗೆ ಗರಿಷ್ಠ 32 ವರ್ಷ ಮೀರಿರಬಾರದು.

ವೃಂದ ಮತ್ತು ನೇಮಕಾತಿ ನಿಯಮ, 2009ರ ಪ್ರಕಾರ ಪೊಲೀಸ್ ಸಬ್-ಇನ್ಸ್‌ಪೆಕ್ಟರ್ (ನಾಗರಿಕ) (ಪುರುಷ ಮತ್ತು ಮಹಿಳಾ) ಹುದ್ದೆಗೆ ಅರ್ಜಿ ಸಲ್ಲಿಸುವ ಸೇವಾನಿರತ ಅಭ್ಯರ್ಥಿಗಳಿಗೆ ಗರಿಷ್ಠ ವಯೋಮಿತಿಯು 29**.09.2021** ಕ್ಕೆ ಸಾಮಾನ್ಯ ವರ್ಗಕ್ಕೆ ಸೇರಿದ ಅಭ್ಯರ್ಥಿಗಳಿಗೆ ಗರಿಷ್ಠ 35 ವರ್ಷಗಳು ಹಾಗೂ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಇತರೆ ಹಿಂದುಳಿದ ವರ್ಗಕ್ಕೆ ಸೇರಿದ ಅಭ್ಯರ್ಥಿಗಳಿಗೆ ಗರಿಷ್ಠ 40 ವರ್ಷಗಳು ಮೀರಿರಬಾರದು ಹಾಗೂ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ ಅಂದರೆ 29**.09.2021** ಕ್ಕೆ ಕನಿಷ್ಠ 5 ವರ್ಷಗಳ ಸೇವೆಯನ್ನು ಇಲಾಖೆಯಲ್ಲಿ ಎ.ಎಸ್.ಐ/ಹೆಚ್.ಸಿ/ಪಿ.ಸಿಯಾಗಿ ಪೂರ್ಣಗೊಳಿಸಿರಬೇಕು.

3) ವಿದ್ಯಾರ್ಹತೆ ?

ಉ: ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ, ಅಂದರೆ 29**.09.2021** ಕ್ಕೆ ಯು.ಜಿ.ಸಿ. ಇಂದ ಮಾನ್ಯತೆ ಪಡೆದಿರುವ ಅಂಗೀಕೃತ ವಿಶ್ವವಿದ್ಯಾಲಯದಿಂದ ಪದವಿ ಅಥವಾ ತತ್ಸಮಾನ ಪದವಿಯನ್ನು ಹೊಂದಿರಬೇಕು.

ಯು.ಜಿ.ಸಿ. ಇಂದ ಮಾನ್ಯತೆ ಪಡೆದಿರುವ ಅಂಗೀಕೃತ ವಿಶ್ವವಿದ್ಯಾಲಯದಲ್ಲಿ ಪದವಿ ಅಥವಾ ತತ್ಸಮಾನ ಪದವಿಯನ್ನು ನಿಗದಿಪಡಿಸಿರುವ ಕೊನೆಯ ದಿನಾಂಕ, ಅಂದರೆ 29.09.2021 ಕ್ಕೆ ಹೊಂದಿರಬೇಕು.

ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ 81 ಸೇವನೆ 2017, ದಿನಾಂಕ: 27.02.2018 ರನ್ವಯ ಪದವಿ ವಿದ್ಯಾರ್ಹತೆಯ ತತ್ಸಮಾನ ವಿದ್ಯಾರ್ಹತೆಗಳನ್ನು ಕೆಳಗಿನಂತೆ ಸ್ಪಷ್ಟಪಡಿಸಲಾಗಿರುತ್ತದೆ.

1) ಯುಜಿಸಿಯಿಂದ ಮಾನ್ಯತೆ ಹೊಂದಿರುವ ಪರಿಗಣಿತ ವಿಶ್ವವಿದ್ಯಾಲಯಗಳು, ಖಾಸಗಿ/ಡೀಮ್ಡ್ ಹಾಗೂ ಹೊರರಾಜ್ಯದ ವಿಶ್ವವಿದ್ಯಾಲಯಗಳಿಂದ ಪಡೆದ ಪದವಿಗಳು. ಆದರೆ ವಿಶ್ವವಿದ್ಯಾಲಯಗಳ ಪದವಿಯ ತತ್ಸಮಾನದ (Equivalence of Degree) ಬಗ್ಗೆ ಶಿಕ್ಷಣಕ್ಕೆ ಸಂಬಂಧಿಸಿದಂತೆ, ಆಯಾ ವಿಶ್ವವಿದ್ಯಾಲಯ ಮತ್ತು ಉದ್ಯೋಗಕ್ಕೆ ಸಂಬಂಧಿಸಿದಂತೆ ಉದ್ಯೋಗ ನೀಡುವ ಪ್ರಾಧಿಕಾರ ತೀರ್ಮಾನ ತೆಗೆದುಕೊಳ್ಳಬೇಕಾಗಿರುತ್ತದೆ.
2) ಅಂಚೆ ಮತ್ತು ದೂರ ಶಿಕ್ಷಣದ ಮುಖಾಂತರ ಪಡೆದಿರುವ ಪದವಿಗಳು. ಆದರೆ, ನಿಯಮಬಾಹಿರವಾಗಿ ಕೆಲವು ವಿಶ್ವವಿದ್ಯಾಲಯಗಳು ಯು.ಜಿ.ಸಿ.ಯ ಅನುಮೋದನೆ ಇಲ್ಲದೆ ನಡೆಸುತ್ತಿರುವ ಅಂಚೆ ಮತ್ತು ದೂರ ಶಿಕ್ಷಣದ ಕೋರ್ಸುಗಳನ್ನು ಹಾಗೂ ಅಂಚೆ ಮತ್ತು ದೂರ ಶಿಕ್ಷಣದ ಮುಖಾಂತರ ಪಡೆದ ತಾಂತ್ರಿಕ ಪದವಿಗಳನ್ನು ನೇಮಕಾತಿಗೆ ಪರಿಗಣಿಸುವಂತಿಲ್ಲ.

**ಟಿಪ್ಪಣಿ:**

**i) ಮೇಲೆ ನಮೂದಿಸಿರುವ ವಿದ್ಯಾರ್ಹತೆ ಹಾಗೂ ಅನುಭವವನ್ನು ಹೊಂದದೇ ಇರುವ ಅಭ್ಯರ್ಥಿಗಳು ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಿದ್ದು, ನಂತರ ನಿಗದಿಪಡಿಸಲಾದ ವಿದ್ಯಾರ್ಹತೆ ಮತ್ತು ಅನುಭವವನ್ನು ಹಾಗೂ ಅಂಕಪಟ್ಟಿ ಹೊಂದಿರುವುದಿಲ್ಲವೆಂದು ನೇಮಕಾತಿ ಸಮಿತಿಗೆ ಪತ್ತೆಯಾದಲ್ಲಿ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ಯಾವುದೇ ಹಂತದಲ್ಲಾದರೂ ರದ್ದುಪಡಿಸಲಾಗುವುದು.**

**ii) ಡಿಪ್ಲೊಮಾ ಇತ್ಯಾದಿ ವಿದ್ಯಾರ್ಹತೆಗಳು ಪದವಿಗೆ ಸಮಾನವಾಗುವುದಿಲ್ಲ. ಆದ್ದರಿಂದ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ಹುದ್ದೆಗೆ ಈ ವಿದ್ಯಾರ್ಹತೆಯ ಅಭ್ಯರ್ಥಿಗಳು ಅರ್ಹರಾಗುವುದಿಲ್ಲ.**

**iii) ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ನಿಗದಿತ ವಿದ್ಯಾರ್ಹತೆಯಾದ ಪದವಿಯನ್ನು ಪಡೆಯಲು ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಹಾಗೂ ಅಂಕಪಟ್ಟಿ ಇಲ್ಲದೆ ಇರುವ ಅಭ್ಯರ್ಥಿಗಳು ಅರ್ಜಿಗಳನ್ನು ಸಲ್ಲಿಸಲು ಅರ್ಹರಾಗಿರುವುದಿಲ್ಲ. ಮೇಲಿನ ವಿದ್ಯಾರ್ಹತೆಯನ್ನು ಹೊರತುಪಡಿಸಿ ಬೇರೆ ಯಾವ ವಿದ್ಯಾರ್ಹತೆಯನ್ನೂ ಪರಿಗಣಿಸಲಾಗುವುದಿಲ್ಲ.**

**ಟಿಪ್ಪಣಿ :**

ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 69 ಎಸ್‌ಸಿಆರ್ 84 ಬೆಂಗಳೂರು, ದಿನಾಂಕ: 23.09.1985 ರನ್ವಯ 'ಸಿ' ವರ್ಗದ ಹುದ್ದೆಗಳಿಗೆ ಆಯ್ಕೆಯಾದ ಯಾವುದೇ ಅಭ್ಯರ್ಥಿಯು ಸರ್ಕಾರವು ವಿಶೇಷ ಅಥವಾ ಸಾಮಾನ್ಯ ಆದೇಶದಲ್ಲಿ ನಿಗದಿಪಡಿಸುವ ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗದ ಹೊರತು ನೇಮಕ ಹೊಂದಲು ಅರ್ಹನಾಗುವುದಿಲ್ಲ. ಆದ್ದರಿಂದ ಅಂತಿಮ ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಎಸ್‌ಎಸ್‌ಎಲ್‌ಸಿ / ಪಿಯುಸಿ / ತತ್ಸಮಾನ ವಿದ್ಯಾರ್ಹತೆಯ ಪರೀಕ್ಷೆಯಲ್ಲಿ ಕನ್ನಡವನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯಾಗಿ ಅಭ್ಯಸಿಸದಿದ್ದರೆ ಅಂತಹ ಅಭ್ಯರ್ಥಿಗಳು ನೇಮಕಾತಿ ಪ್ರಾಧಿಕಾರ ನಡೆಸುವ ಕನ್ನಡ ಭಾಷಾ ಪರೀಕ್ಷೆಯಲ್ಲಿ ಕಡ್ಡಾಯವಾಗಿ ಉತ್ತೀರ್ಣರಾಗತಕ್ಕದ್ದು.

4) ಅರ್ಜಿ ಮಾರಾಟವಾಗುತ್ತಿರುವ ಬಗ್ಗೆ ಹೇಗೆ ತಿಳಿದುಕೊಳ್ಳಬಹುದು ?

ಉ: ಅರ್ಜಿ ಮಾರಾಟ ಮಾಡಲಾಗುವುದಿಲ್ಲ. ನೇಮಕಾತಿ ಪ್ರಕ್ರಿಯೆಯನ್ನು ಪ್ರಾರಂಭಿಸಲು ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆನ್-ಲೈನ್ ಮುಖಾಂತರ ಆಹ್ವಾನಿಸಲಾಗುವುದು. ಅದರ ಬಗ್ಗೆ ಆಂಗ್ಲ / ಕನ್ನಡ ದಿನಪತ್ರಿಕೆಗಳಲ್ಲಿ ವ್ಯಾಪಕ ಪ್ರಚಾರವನ್ನು ನೀಡುವುದಲ್ಲದೆ ದೂರದರ್ಶನ ಮತ್ತು ಆಕಾಶವಾಣಿಗಳಲ್ಲಿ ಪ್ರಸಾರ ಮಾಡಲಾಗುವುದು. ಕಛೇರಿಯ ಅಧಿಕೃತ ವೆಬ್‌ಸೈಟ್ www.ksp.gov.in or www.recruitment.ksp.gov.in ನಲ್ಲಿ ನೀಡಲಾಗುವ ಅರ್ಜಿಯನ್ನು ಭರ್ತಿ ಮಾಡಿ ಸಲ್ಲಿಸಬೇಕಾಗಿರುತ್ತದೆ.

5) ಎಷ್ಟು ಖಾಲಿ ಹುದ್ದೆಗಳಿಗೆ ನೇಮಕಾತಿ ಮಾಡಲಾಗುತ್ತಿದೆ?
ಉ: ಈ ಕೆಳಗೆ ನಮೂದಿಸಿರುವ ಖಾಲಿ ಹುದ್ದೆಗಳ ಸಂಖ್ಯೆ ತಾತ್ಕಾಲಿಕವಾಗಿದ್ದು, ಅವಶ್ಯಕತೆ ಹಾಗೂ ಸಂದರ್ಭಕ್ಕೆ ಅನುಗುಣವಾಗಿ ಬದಲಾವಣೆ ಮಾಡಲಾಗುವುದು.

**ಪ್ರಶಂಸನೀಯ ಕ್ರೀಡಾಪಟುಗಳ ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್) ಮತ್ತು ಪೊಲೀಸ್ ಸಬ್-ಇನ್ಸ್‌ಪೆಕ್ಟರ್ (ಸಿವಿಲ್) (ಪುರುಷ & ಮಹಿಳಾ) ಹಾಗೂ ಸೇವೆಯಲ್ಲಿರುವವರು (ಮಿಕ್ಕುಳಿದ ವೃಂದದ) ಮತ್ತು ಕಲ್ಯಾಣ-ಕರ್ನಾಟಕ ಪ್ರದೇಶದ (ಸ್ಥಳೀಯ ವೃಂದದ) ಖಾಲಿ ಹುದ್ದೆಗಳ ವಿವರ:**

## ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್)

| ವೃಂದ | 2% ಕ್ರೀಡಾಪಟು ಹುದ್ದೆಗಳು |
|---|---|
| ಎ) ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್) (ಪುರುಷ) (ಮಿಕ್ಕುಳಿದ ವೃಂದ) | 53 |
| ಬಿ) ಮಹಿಳಾ ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್) (ಮಿಕ್ಕುಳಿದ ವೃಂದ) | 17 |
| **ಒಟ್ಟು** | **70** |

## ಕಲ್ಯಾಣ ಕರ್ನಾಟಕ ಮೀಸಲಾತಿಗೊಳಪಡುವ ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್)

| ವೃಂದ | 2% ಕ್ರೀಡಾಪಟು ಹುದ್ದೆಗಳು |
|---|---|
| ಎ) ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್) (ಪುರುಷ) (ಸ್ಥಳೀಯ) | 6 |
| ಬಿ) ಮಹಿಳಾ ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್) (ಸ್ಥಳೀಯ) | 2 |
| ಸಿ) ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್) (ಪುರುಷ) (ಮಿಕ್ಕುಳಿದ ವೃಂದ) | 2 |
| **ಒಟ್ಟು** | **10** |

## ಪೊಲೀಸ್ ಸಬ್-ಇನ್ಸ್‌ಪೆಕ್ಟರ್ (ಸಿವಿಲ್)

| ವೃಂದ | 2% ಕ್ರೀಡಾಪಟು ಹುದ್ದೆಗಳು |
|---|---|
| ಎ) ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಸಿವಿಲ್) (ಪುರುಷ) (ಮಿಕ್ಕುಳಿದ ವೃಂದ) | 11 |
| ಬಿ) ಮಹಿಳಾ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಸಿವಿಲ್) (ಮಿಕ್ಕುಳಿದ ವೃಂದ) | 03 |
| ಸಿ) ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಸಿವಿಲ್) (ಪುರುಷ) ಸೇವೆಯಲ್ಲಿರುವವರಿಗೆ (ಮಿಕ್ಕುಳಿದ ವೃಂದ) | 02 |
| ಡಿ) ಮಹಿಳಾ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಸಿವಿಲ್) ಸೇವೆಯಲ್ಲಿರುವವರಿಗೆ (ಮಿಕ್ಕುಳಿದ ವೃಂದ) | 01 |
| **ಒಟ್ಟು** | **17** |

## ಕಲ್ಯಾಣ ಕರ್ನಾಟಕ ಮೀಸಲಾತಿಗೊಳಪಡುವ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಸಿವಿಲ್)

| ವೃಂದ | 2% ಕ್ರೀಡಾಪಟು ಹುದ್ದೆಗಳು |
|---|---|
| ಎ) ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಸಿವಿಲ್) (ಪುರುಷ) (ಸ್ಥಳೀಯ) | 02 |
| ಬಿ) ಮಹಿಳಾ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಸಿವಿಲ್) (ಸ್ಥಳೀಯ) | 01 |
| **ಒಟ್ಟು** | **03** |

**ಟಿಪ್ಪಣಿ:**

**ಮೇಲ್ಕಂಡ ಹುದ್ದೆಗಳಿಗೆ ನೀಡಿರುವ ವರ್ಗೀಕರಣವನ್ನು ಅನುಬಂಧ–'ಎ' ನಲ್ಲಿ ಈ ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿರುತ್ತದೆ.**

6) ನೇರ ಅಭ್ಯರ್ಥಿಯಾಗಿ ಅರ್ಜಿ ಸಲ್ಲಿಸಲು ಇರಬೇಕಾದ ಅರ್ಹತೆಗಳೇನು ?

ಉ:

a) ಭಾರತೀಯ ನಾಗರಿಕನಾಗಿರತಕ್ಕದ್ದು.

b) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ, ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

c) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

d) **"ಪ್ರಶಂಸನೀಯ ಕ್ರೀಡಾಪಟು"** ಎಂದರೆ ಭಾರತಿಯ ನಾಗರಿಕನು ಕ್ರಮ ಸಂಖ್ಯೆ:07ರ Table-1ರಲ್ಲಿ ತಿಳಿಸಲಾಗಿರುವ ಯಾವುದಾದರೂ ಕ್ರೀಡೆಗಳಲ್ಲಿ ನಿರ್ದಿಷ್ಟ ಪಡಿಸಿರುವ ವಲಯ, ರಾಷ್ಟ್ರಿಯ ಅಥವಾ ಅಂತರಾಷ್ಟ್ರೀಯ ಕ್ರೀಡೆಗಳಲ್ಲಿ ಭಾಗವಹಿಸಿ ಕ್ರಮ ಸಂಖ್ಯೆಳ–08ರ Table-2ರಲ್ಲಿನ ಪದಕಗಳನ್ನು ಪಡೆದಿರಬೇಕು ಹಾಗೂ ಸದರಿ ಕ್ರೀಡೆಗಳಲ್ಲಿನ ಸಾಧನೆಯನ್ನು ಮಾಡುವ ಪೂರ್ವದಲ್ಲಿ ಕನಿಷ್ಠ 05 ವರ್ಷಗಳ ಕಾಲ ಕರ್ನಾಟಕದಲ್ಲಿ ವಾಸವಾಗಿರಬೇಕು.
ಅಲ್ಲದೆ ಪ್ರಶಂಸನಿಯ ಕ್ರೀಡಾಪಟುಗಳು ಒಲಂಪಿಕ್ಸ್ ಅಥವಾ ಏಷಿಯನ್ ಗೇಮ್ಸ್ ಅಥವಾ ಕಾಮನ್‌ವೆಲ್ತ್ ಗೇಮ್ಸ್ ಕ್ರೀಡಾಕೂಟಗಳಲ್ಲಿ ಭಾಗವಹಿಸುವ 05 ವರ್ಷಗಳ ಮೊದಲು ರಾಷ್ಟ್ರೀಯ ಕ್ರೀಡಾಕೂಟಗಳಲ್ಲಿ ಕನಿಷ್ಠ 3 ವರ್ಷಗಳ ಕಾಲ ಕರ್ನಾಟಕವನ್ನು ಪ್ರತಿನಿಧಿಸಿರಬೇಕು.

7) ಸೇವಾ ನಿರತ ಅಭ್ಯರ್ಥಿಯಾಗಿ ಅರ್ಜಿಸಲ್ಲಿಸಲು ಇರಬೇಕಾದ ಅರ್ಹತೆಗಳೇನು ?
ಉ: ಸೇವಾನಿರತ ಅಭ್ಯರ್ಥಿಗಳು ಅಂದರೆ ಪೊಲೀಸ್ ಇಲಾಖೆಯ ವಿವಿಧ ಘಟಕಗಳಲ್ಲಿ ಕನಿಷ್ಠ 5 ವರ್ಷ ಸೇವೆ ಸಲ್ಲಿಸುತ್ತಿರುವ ಪಿ.ಸಿ., ಹೆಚ್.ಸಿ. ಹಾಗೂ ಎ.ಎಸ್.ಐ ಪುರುಷ ಹಾಗೂ ಮಹಿಳಾ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ. ಸಾಮಾನ್ಯ ಅಭ್ಯರ್ಥಿಗಳು ಗರಿಷ್ಠ 35 ವರ್ಷದೊಳಗಿರಬೇಕು ಹಾಗೂ ಹಿಂದುಳಿದ ವರ್ಗಗಳ ಅಭ್ಯರ್ಥಿಗಳು ಗರಿಷ್ಠ 40 ವರ್ಷದೊಳಗಿರಬೇಕು. ಯು.ಜಿ.ಸಿಯಿಂದ ಮಾನ್ಯತೆ ಪಡೆದಿರುವ ಅಂಗೀಕೃತ ವಿಶ್ವವಿದ್ಯಾಲಯದಿಂದ ಪದವಿ ಅಥವಾ ತತ್ಸಮಾನ ಪದವಿಯನ್ನು ಹೊಂದಿರಬೇಕು ಹಾಗೂ ಪುರುಷ ಅಭ್ಯರ್ಥಿಗಳು ಕನಿಷ್ಠ ಎತ್ತರ 168 ಸೆಂ.ಮೀ, ಮಹಿಳಾ ಅಭ್ಯರ್ಥಿಗಳು ಕನಿಷ್ಟ ಎತ್ತರ 157 ಸೆಂ.ಮೀ ಹಾಗೂ ತೂಕ ಕನಿಷ್ಟ 45ಕೆ.ಜಿ. ಹೊಂದಿರಬೇಕು.

8) ಸೇವಾ ನಿರತ ಅಭ್ಯರ್ಥಿ ಯಾರು ?
ಉ: **ಸೇವಾನಿರತ ಅಭ್ಯರ್ಥಿ:** ಪೊಲೀಸ್ ಇಲಾಖೆಯ ಯಾವುದೇ ವೃಂದದಲ್ಲಿ ಸಹಾಯಕ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ಹೆಡ್ ಕಾನ್ಸ್‌ಟೇಬಲ್ / ಪೊಲೀಸ್ ಕಾನ್ಸ್‌ಟೇಬಲ್ ಆಗಿ ಕನಿಷ್ಠ 5 ವರ್ಷಗಳ ಸೇವೆಯನ್ನು ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ ಅಂದರೆ 29.09.2021 ಕ್ಕೆ ಪೂರ್ಣಗೊಳಿಸಿರಬೇಕು ಹಾಗೂ ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಪೊಲೀಸ್ ಇಲಾಖೆಯಲ್ಲಿನ ಮೇಲ್ಕಂಡ ವೃಂದಗಳಲ್ಲಿ ಸೇವೆ ಸಲ್ಲಿಸುತ್ತಿರಬೇಕು.

9) ನೇಮಕಾತಿಯಲ್ಲಿ ಮಹಿಳಾ ಅಭ್ಯರ್ಥಿಗಳು ಯಾವ ಹುದ್ದೆಗಳಿಗೆ ಅರ್ಜಿ ಸಲ್ಲಿಸಬಹುದು ?
ಉ: ಮಹಿಳಾ ಅಭ್ಯರ್ಥಿಗಳಿಗೆ ಮೀಸಲಿರಿಸಲಾಗಿರುವ ಹುದ್ದೆಗಳಿಗೆ ಮಹಿಳಾ ಆಭ್ಯರ್ಥಿಗಳು ಅರ್ಜಿಸಲ್ಲಿಸಬಹುದಾಗಿರುತ್ತದೆ.

10) ಅರ್ಜಿ ಸಲ್ಲಿಸುವಾಗ ಕರ್ತವ್ಯ ನಿರ್ವಹಿಸಲು ಬಯಸುವ ವಲಯ/ ಘಟಕಕ್ಕೆ ಆದ್ಯತೆ ಬಯಸಬಹುದೇ ?

ಉ: ಹೌದು. ಅಭ್ಯರ್ಥಿಯು ಅರ್ಜಿ ಸಲ್ಲಿಸುವಾಗ ತಾನು ಕರ್ತವ್ಯ ನಿರ್ವಹಿಸಲು ಇಚ್ಚಿಸುವ ವಲಯಗಳಿಗೆ /ಘಟಕಗಳಿಗೆ ಆಧ್ಯತೆಯನ್ನು ನೀಡಬಹುದಾಗಿದೆ. ಇಚ್ಚಿಸಿರುವ ವಲಯ/ಘಟಕಗಳನ್ನು ಆಧಾರವಾಗಿಟ್ಟುಕೊಂಡು ನಿಯಮಾನುಸಾರ ಮೆರಿಟ್ ಮತ್ತು ಮಿಸಲಾತಿ ಆಧಾರಿಸಿ ವಲಯ/ಘಟಕಗಳಿಗೆ ಹಂಚಿಕೆ ಮಾಡಿ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ತಯಾರಿಸಲಾಗುವುದು. ಅರ್ಜಿಯಲ್ಲಿ ನೀಡಲಾಗಿರುವ ವಲಯ/ಘಟಕಗಳಿಗೆ ಆದ್ಯತೆ ನೀಡದಿದ್ದಲ್ಲಿ ಅರ್ಜಿಯನ್ನು ಭರ್ತಿ ಮಾಡಲು ಸಾಧ್ಯವಾಗುವುದಿಲ್ಲ.

**11) ಪೊಲೀಸ್ ಸಬ್-ಇನ್ಸ್‌ಪೆಕ್ಟರ್ (ಸಿವಿಲ್) (ಪುರುಷ ಮತ್ತು ಮಹಿಳಾ) ಕಲ್ಯಾಣ ಕರ್ನಾಟಕ (ಸ್ಥಳೀಯ) ಮತ್ತು ಮಿಕ್ಕುಳಿದ ವೃಂದ(ಪರಸ್ಥಳೀಯ) ಹುದ್ದೆಗೆ ಯಾರು ಅರ್ಜಿ ಸಲ್ಲಿಸಬಹುದಾಗಿದೆ ?**

**ಉ: ಅಧಿಸೂಚನೆಯಲ್ಲಿ ನಿಗಧಿಪಡಿಸಲಾಗಿರುವ ಮಾನದಂಡಗಳಾನುಸಾರ ಅರ್ಹರಿರುವ ಎಲ್ಲಾ ಅಭ್ಯರ್ಥಿಗಳು ಪೊಲೀಸ್ ಸಬ್-ಇನ್ಸ್‌ಪೆಕ್ಟರ್ (ಸಿವಿಲ್) (ಪುರುಷ ಮತ್ತು ಮಹಿಳಾ) ಕಲ್ಯಾಣ ಕರ್ನಾಟಕ (ಸ್ಥಳೀಯ) ಮತ್ತು ಮಿಕ್ಕುಳಿದ ವೃಂದ(ಪರಸ್ಥಳೀಯ) ನೇರಅಭ್ಯರ್ಥಿಗಳು, ಸೇವಾನಿರತ ಅಭ್ಯರ್ಥಿಗಳು ಹುದ್ದೆಗೆ ಅರ್ಜಿಯನ್ನು ಸಲ್ಲಿಸಬಹುದಾಗಿರುತ್ತದೆ.**

**ಸೂಚನೆ:** ಅಭ್ಯರ್ಥಿಗಳು ಒಂದು ಅರ್ಜಿ ಮಾತ್ರ ಸಲ್ಲಿಸಬಹುದಾಗಿದೆ. ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಿದ ಪಕ್ಷದಲ್ಲಿ ಅಂತಿಮವಾಗಿ/ ಕೊನೆಯದಾಗಿ ಸಲ್ಲಿಸಿದ ಅರ್ಜಿಯನ್ನು ಮಾತ್ರ ಪರಿಗಣಿಸಲಾಗುವುದು.

**ಕಲ್ಯಾಣ-ಕರ್ನಾಟಕ ಮೀಸಲಾತಿಯ ಸಲುವಾಗಿ ಪಡೆಯಬೇಕಾಗಿರುವ ಪ್ರಮಾಣ ಪತ್ರ:**

ನೇರ ನೇಮಕಾತಿಯಲ್ಲಿ ಸ್ಥಳೀಯ ವ್ಯಕ್ತಿಯೆಂಬ ಮೀಸಲಾತಿಯನ್ನು ಕ್ಲೇಮು ಮಾಡುವ ಅರ್ಜಿದಾರರು ಒಂದು ಸ್ವಯಂ ಘೋಷಿತ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು. ಪರಂತು ಅರ್ಜಿ ಸಲ್ಲಿಸುವ ದಿನಾಂಕದಂದು ಅರ್ಜಿದಾರರು ಸ್ಥಳೀಯ ವ್ಯಕ್ತಿಯೆಂದು ಅರ್ಹತೆ ಪಡೆಯುವುದು ಕಡ್ಡಾಯವಾಗಿರುತ್ತದೆ. ತಾತ್ಕಾಲಿಕವಾಗಿ ಆಯ್ಕೆಗೊಂಡ ಅಭ್ಯರ್ಥಿಗಳು ದಾಖಲಾತಿ ಪರೀಕ್ಷೆಗಳ ಸಮಯದಲ್ಲಿ ಸಕ್ಷಮ ಪ್ರಾಧಿಕಾರದಿಂದ ನೀಡಲಾದ ಅರ್ಹತಾ ಪ್ರಮಾಣ ಪತ್ರ (ಅನುಬಂಧ-ಎ) ನೀಡತಕ್ಕದ್ದು. ಅರ್ಹತಾ ಪ್ರಮಾಣ ಪತ್ರದಲ್ಲಿ ಸಕ್ಷಮ ಪ್ರಾಧಿಕಾರಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಲಾದ ಅಂತಿಮ ದಿನಾಂಕದಂದು ಅಭ್ಯರ್ಥಿಯು ಸಾರ್ವಜನಿಕ ಉದ್ಯೋಗ ಆದೇಶದಂತೆ ಸ್ಥಳೀಯ ವ್ಯಕ್ತಿಯೆಂದು ಅರ್ಹತೆ ಪಡೆದಿರುತ್ತಾನೆಂದು ಒಂದು ಅಡಿ ಟಿಪ್ಪಣಿಯನ್ನು ದಾಖಲಿಸುವುದು.

**ಸೂಚನೆ:-**

a) ಅರ್ಹತಾ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಪಡೆದಿಟ್ಟುಕೊಂಡಿರತಕ್ಕದ್ದು.

b) ಕಲ್ಯಾಣ-ಕರ್ನಾಟಕ ಮೀಸಲಾತಿಗೆ ಸಂಬಂಧಿಸಿದಂತೆ ಪ್ರಮಾಣ ಪತ್ರಗಳ ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿರುತ್ತದೆ.

c) ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವುದರಿಂದ ಯಾವುದೇ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಲಗತ್ತಿಸಲು ಅವಕಾಶ ಇರುವುದಿಲ್ಲ, ಆದರೆ ಪ್ರಮಾಣ ಪತ್ರಗಳನ್ನು / ದಾಖಲೆಗಳನ್ನು ಪಡೆದಿರಬೇಕು ಇಲ್ಲವೇ ಸಿಂಧುವಾಗಿರಬೇಕು ಹಾಗೂ ನೇಮಕಾತಿ ಸಮಿತಿಯು ಪರಿಶೀಲನೆಗಾಗಿ ಹಾಜರುಪಡಿಸಲು ಸೂಚಿಸಿದಾಗ ಅರ್ಜಿಯಲ್ಲಿ ನಮೂದಿಸಿರುವ ಮೀಸಲಾತಿಯ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದ್ದಲ್ಲಿ ಕೆಳಕಂಡ ಕ್ರಮ ಕೈಗೊಳ್ಳಲಾಗುವುದು.

12) ದೇಹದಾರ್ಡ್ಯತೆ ಪರೀಕ್ಷೆಗೆ ಎರಡು ಕೇಂದ್ರಗಳಲ್ಲಿ ಭಾಗಹಿಸಬಹುದೇ?

ಉ: ಅಭ್ಯರ್ಥಿಗಳು ದೇಹದಾರ್ಡ್ಯತೆ ಪರೀಕ್ಷೆಗೆ ಒಂದು ಪರೀಕ್ಷಾ ಕೇಂದ್ರದಲ್ಲಿ ಮಾತ್ರ ಭಾಗವಹಿಸಬಹುದಾಗಿರುತ್ತದೆ.

13) ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಲು ಎಷ್ಟು ಶುಲ್ಕವನ್ನು ಪಾವತಿಸಬೇಕು ?

ಉ: ಎಸ್.ಸಿ, ಎಸ್.ಟಿ, ಪ್ರವರ್ಗ-01 ರ ಅಭ್ಯರ್ಥಿಗಳಿಗೆ – ₹ 250/- ಗಳು ಮತ್ತು ಜಿಎಂ, 2ಎ, 2ಬಿ, 3ಎ, 3ಬಿ ರ ಅಭ್ಯರ್ಥಿಗಳಿಗೆ ₹ 500/- ಗಳನ್ನು ಪಾವತಿಸಿ ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಬಹುದಾಗಿರುತ್ತದೆ.

14) ಭರ್ತಿ ಮಾಡಿದ ಅರ್ಜಿಗಳನ್ನು ಎಲ್ಲಿ ಸಲ್ಲಿಸಬೇಕಾಗುತ್ತದೆ?

ಉ: ಅಭ್ಯರ್ಥಿಯು ಆನ್‌ಲೈನ್ www.ksp.gov.in ಅಥವಾ www.recruitment.ksp.gov.in ಮುಖಾಂತರ ಭರ್ತಿ ಮಾಡಿದ ಅರ್ಜಿಗಳನ್ನು ನಿಗದಿಪಡಿಸಿದ ಕೊನೆಯ ದಿನಾಂಕ ಅಂದರೆ 29.09.2021 ರ ಸಾಯಂಕಾಲ 6.00 ಗಂಟೆಯೊಳಗೆ ಸಲ್ಲಿಸಬಹುದಾಗಿರುತ್ತದೆ.

15) ಅರ್ಜಿಗಳನ್ನು ಜೆರಾಕ್ಸ್ ಮಾಡಿ ಅಥವಾ ಅರ್ಜಿಗಳನ್ನು ಟೈಪ್ ಮಾಡಿ ಪ್ರತಿಗಳನ್ನು ಸಲ್ಲಿಸಬಹುದೇ?

ಉ: ಇಲ್ಲ. ಇಲಾಖೆಯು ನಿಗದಿ ಪಡಿಸಿರುವ ಮೂಲ ಅರ್ಜಿಯನ್ನು ಆನ್‌ಲೈನ್ ಮುಖಾಂತರ ಸಲ್ಲಿಸಬೇಕಾಗಿರುತ್ತದೆ. ಆನ್‌ಲೈನ್ ಮುಖಾಂತರ ಸಲ್ಲಿಸಿದ ಅರ್ಜಿಯನ್ನು ಮಾತ್ರ ಪರಿಗಣಿಸಲಾಗುವುದು. ಜೆರಾಕ್ಸ್ ಮಾಡಿದ ಅಥವಾ ಖುದ್ದಾಗಿ ಮತ್ತು ಅಂಚೆ ಮೂಲಕ ಸಲ್ಲಿಸುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

16) ಯಾವ ರೀತಿಯಲ್ಲಿ ಶುಲ್ಕವನ್ನು ಪಾವತಿಸಬೇಕು?

ಉ: ಆನ್‌ಲೈನ್ ಮೂಲಕ ಸೃಜಿಸಿರುವ ಬ್ಯಾಂಕ್ ಚಲನ್‌ನ್ನು ಮುದ್ರಿಸಿ, ಹೆಚ್.ಡಿ.ಎಫ್.ಸಿ ಬ್ಯಾಂಕಿನ ಶಾಖೆಗಳಲ್ಲಿ ಅಥವಾ ಅಂಚೆ ಕಛೇರಿಯ ವೇಳೆಯಲ್ಲಿ ಶುಲ್ಕವನ್ನು ಪಾವತಿಸಬಹುದಾಗಿದೆ, ಬೇರಾವುದೇ ಬ್ಯಾಂಕಿನಲ್ಲಿ ಪಾವತಿಸಲು ಅವಕಾಶವಿರುವುದಿಲ್ಲ. ಬ್ಯಾಂಕ್ ಹುಂಡಿ, ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಅಥವಾ ಇನ್ನಾವುದೇ ಸ್ವರೂಪದಲ್ಲಿ ಶುಲ್ಕವನ್ನು ಪಾವತಿಸತಕ್ಕದ್ದಲ್ಲ ಶುಲ್ಕವನ್ನು ಪಾವತಿಸದ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.

17.ಎ) ಆನ್‌ಲೈನ್ ಮೂಲಕ ಸಲ್ಲಿಸಿರುವ ಅರ್ಜಿಯಲ್ಲಿನ ಅಂಶಗಳನ್ನು ಯಾವುದೇ ಹಂತದಲ್ಲಿ ಬದಲಾವಣೆ ಮಾಡಬಹುದೇ?

ಉ: ಒಮ್ಮೆ ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ನಂತರ ನೀಡಿರುವ ಮಾಹಿತಿಯನ್ನು ಯಾವುದೇ ಹಂತದಲ್ಲಿ ಬದಲಾವಣೆ ಮಾಡಲು ಅವಕಾಶವಿರುತ್ತದೆ.

**<u>ವಿಶೇಷ ಸೂಚನೆ:-</u>**

**ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕವು ಮುಕ್ತಾಯವಾದ ನಂತರ 10 ದಿನಗಳ ಕಾಲಾವಕಾಶ ನೀಡಲಾಗುತ್ತಿದ್ದು, ಸದರಿ ದಿನಾಂಕದೊಳಗಾಗಿ ಅಭ್ಯರ್ಥಿಯು ತಾನು ಸಲ್ಲಿಸಿರುವ ಅರ್ಜಿಯಲ್ಲಿ ಹೆಸರು, ಜನ್ಮ ದಿನಾಂಕ, ಕೋರಿರುವ ಮೀಸಲಾತಿ ಹಾಗೂ ಇತರೆ ಯಾವುದೇ ಅಂಶಗಳ ಬದಲಾವಣೆ ಮಾಡಬೇಕಾದಲ್ಲಿ ಖುದ್ದಾಗಿ / ಅಂಚೆ ಮೂಲಕ ಸಂಬಂಧಪಟ್ಟ ದೃಢೀಕೃತ ದಾಖಲೆಗಳೊಂದಿಗೆ ಅಡಿಷನಲ್ ಡೈರೆಕ್ಟರ್ ಜನರಲ್ ಆಫ್ ಪೊಲೀಸ್, ನೇಮಕಾತಿ ಕಾರ್ಲಟನ್ ಭವನ, ಅರಮನೆ ರಸ್ತೆ, ಬೆಂಗಳೂರು ರವರ ಕಛೇರಿಗೆ ಸಲ್ಲಿಸತಕ್ಕದ್ದು. ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಸಲ್ಲಿಸುವ ಯಾವುದೇ ಮನವಿಗಳನ್ನು ಪರಿಗಣಿಸಲಾಗುವುದಿಲ್ಲ.**

17.ಬಿ). ಒಮ್ಮೆ ಪಾವತಿಸಿದ ಶುಲ್ಕವನ್ನು ಹಿಂಪಡೆಯಬಹುದೇ?

ಉ: ಒಮ್ಮೆ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಿ, ಸೃಜಿಸಿರುವ ಚಲನ್‌ನಿಂದ ಸಂಬಂಧಪಟ್ಟ ಬ್ಯಾಂಕಿನಲ್ಲಿ ಅಥವಾ ಅಂಚೆ ಕಛೇರಿಯಲ್ಲಿ ಶುಲ್ಕವನ್ನು ಪಾವತಿಸಿದ ನಂತರ ಯಾವುದೇ ಕಾರಣಗಳಿಂದ ಶುಲ್ಕವನ್ನು ಹಿಂದಿರುಗಿಸುವುದಿಲ್ಲ. ಹಾಗೂ ನೇಮಕಾತಿ ಸಮಿತಿಯು ನೆಡಸುವ ಯಾವುದೇ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ.

17.ಸಿ). ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದ ನಂತರ ಸಲ್ಲಿಸಿದ ಅರ್ಜಿಗಳು ಮತ್ತು ಪಾವತಿಸಿದ ಶುಲ್ಕವನ್ನು ಪರಿಗಣಿಸಲಾಗುವುದೇ?

ಉ: ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ: **29.09.2021** ರ ನಂತರ ಅರ್ಜಿಗಳನ್ನು ಸಲ್ಲಿಸಲು ಅವಕಾಶವಿರುವುದಿಲ್ಲ. ಹಾಗೆಯೆ ನಿಗದಿಪಡಿಸಿದ ಕೊನೆಯ ದಿನಾಂಕ: 01.**10.2021** ರ ನಂತರ ಶುಲ್ಕವನ್ನು ಪಾವತಿಸಲು ಸಾಧ್ಯವಿರುವುದಿಲ್ಲ.

17.ಡ) ಮೀಸಲಾತಿಯ ಅಡಿಯಲ್ಲಿ ಆಯ್ಕೆ ಬಯಸಿರುವ ಅಭ್ಯರ್ಥಿಗಳು ಯಾವ ದಿನಾಂಕದ ಪ್ರಮಾಣ ಪತ್ರಗಳನ್ನು ಯಾವ ನಮೂನೆಯಲ್ಲಿ ಪಡೆದಿಟ್ಟುಕೊಂಡಿರಬೇಕು?

ಉ: ಮೀಸಲಾತಿಯ ಅಡಿಯಲ್ಲಿ ಅಯ್ಕೆಯನ್ನು ಬಯಸುವ ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದ ಸಂಜೆಯೊಳಗೆ (ದಿನಾಂಕ: **29.09.2021**) ಸಂಬಂಧಪಟ್ಟ ಪ್ರಾಧಿಕಾರದಿಂದ ಅಧಿಸೂಚನೆಯಲ್ಲಿ ನಮೂದಿಸಿರುವ ಸಂಬಂಧಪಟ್ಟ ಮೀಸಲಾತಿಗಳ ನಮೂನೆಯಲ್ಲಿ ಅಥವಾ ಇತ್ತೀಚಿನ ನಮೂನೆಯಲ್ಲಿ ನಿಗದಿಪಡಿಸಿರುವ ದಿನಾಂಕಕ್ಕೆ ಅನ್ವಯವಾಗುವಂತೆ ಪಡೆಪಡೆದಿಟ್ಟುಕೊಂಡಿರತಕ್ಕದ್ದು.

17.ಇ).ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವಾಗ ತಾಂತ್ರಿಕ ದೋಷ ಉಂಟಾದಲ್ಲಿ ಯಾರನ್ನು ಸಂಪರ್ಕಿಸಬೇಕು?

ಉ: ಆನ್‌ಲೈನ್ ಮೂಲಕ ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ತಾಂತ್ರಿಕ ಅಥವಾ ಬೇರೆ ಸಮಸ್ಯೆಗಳು ಎದುರಾದಲ್ಲಿ ನೇಮಕಾತಿ ಸಮಿತಿಯ ಸಹಾಯವಾಣಿ ಸಂಖ್ಯೆ: **080-22943346ಗೆ** ಕರೆ ಮಾಡಿ ಅಗತ್ಯ ಮಾಹಿತಿಯನ್ನು ಪಡೆದು ಅರ್ಜಿ ಸಲ್ಲಿಸಬಹುದಾಗಿದೆ. ಅಥವಾ ಸಮಸ್ಯೆಯು ಸರಿಯಾದ ಪಕ್ಷದಲ್ಲಿ ಆನ್‌ಲೈನ್‌ನಲ್ಲಿ ಭರ್ತಿ ಮಾಡಿರುವ ಮಾಹಿತಿಯು ಲಭ್ಯವಿದ್ದಲ್ಲಿ ಸದರಿ ಅರ್ಜಿಯನ್ನೇ ಮುಂದುವರೆಸಬಹುದು ಅಥವಾ ಹೊಸ ಅರ್ಜಿಯನ್ನು ತೆರೆದು ಮಾಹಿತಿ ಭರ್ತಿ ಮಾಡುವ ಪ್ರಕ್ರಿಯೆಯನ್ನು ಕೈಗೊಳ್ಳುವುದು.

18) ಪಿ.ಎಸ್.ಐ.(ಸಿವಿಲ್) ಹುದ್ದೆಗೆ ಒಂದಕ್ಕಿಂತ ಹೆಚ್ಚಿನ ಅರ್ಜಿಯನ್ನು ಸಲ್ಲಿಸಬಹುದೇ?

ಉ: ಇಲ್ಲ. ಒಬ್ಬ ಅಭ್ಯರ್ಥಿಯು ಒಂದಕ್ಕಿಂತ ಹೆಚ್ಚಿನ ಅರ್ಜಿಯನ್ನು ಸಲ್ಲಿಸಿದಲ್ಲಿ ಅಂತಿಮವಾಗಿ / ಕೊನೆಯಾದಾಗಿ ಸಲ್ಲಿಸಲಾಗುವ ಅರ್ಜಿಯನ್ನು ಮಾತ್ರ ಪರಿಗಣಿಸಿ, ಉಳಿದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

19) ನಾನು ಅರ್ಹನಿರುವ ಬಗ್ಗೆ ಹೇಗೆ ತಿಳಿದುಕೊಳ್ಳುವುದು?

ಉ: ಅಧಿಸೂಚನೆಯಲ್ಲಿ ನಮೂದಿಸಲಾಗಿರುವ ಷರತ್ತುಗಳನ್ವಯ ಅರ್ಹತೆಯ ಬಗ್ಗೆ ಖಾತರಿ ಪಡಿಸಿಕೊಳ್ಳಬಹುದು ಹಾಗೂ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವಾಗ ನೀವು ಅರ್ಹರಿದ್ದಲ್ಲಿ ಮಾತ್ರ ಅರ್ಜಿ ಸಲ್ಲಿಸಬಹುದಾಗಿರುತ್ತದೆ. ಅನರ್ಹನಾಗಿದ್ದರೆ ಅರ್ಜಿಯನ್ನು ಸಲ್ಲಿಸಲು ಸಾಧ್ಯವಾಗುವುದಿಲ್ಲ.

20) ದೇಹದಾರ್ಢ್ಯತೆ ಪರೀಕ್ಷೆಗೆ ಕರೆಪತ್ರವನ್ನು ಹೇಗೆ ಪಡೆಯಬೇಕು?

ಉ: ದೇಹದಾರ್ಢ್ಯತೆ ಪರೀಕ್ಷೆಗೆ ಕರೆಪತ್ರವನ್ನು ಆನ್‌ಲೈನ್ ಮುಖಾಂತರ ಪಡೆಯಬಹುದಾಗಿದೆ. ಪ್ರತ್ಯೇಕವಾಗಿ ಕರೆ ಪತ್ರವನ್ನು ಕಳುಹಿಸಲಾಗುವುದಿಲ್ಲ.

**21) ದೇಹದಾರ್ಢ್ಯತೆ ಪರೀಕ್ಷೆಗಳನ್ನು ಎಲ್ಲಿ ನಡೆಸಲಾಗುವುದು?**

**ಉ: ದೇಹದಾರ್ಢ್ಯತೆ ಪರೀಕ್ಷೆಗಳನ್ನು ನೇಮಕಾತಿ ಸಮಿತಿಯು ನಿರ್ಧರಿಸುವ ಕೇಂದ್ರದಲ್ಲಿ ಮಾತ್ರ ನಡೆಸಲಾಗುವುದು.**

22) ದೇಹದಾರ್ಢ್ಯತೆ ಪರೀಕ್ಷೆ ಎಂದರೇನು ?

ಉ: ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಈ ಕೆಳಕಂಡ ಅಂಶಗಳಿರುತ್ತವೆ.

**ಕನಿಷ್ಟ ದೈಹಿಕ ಮಾನದಂಡಗಳು: ಪೊಲೀಸ್ ಕಾನ್ಸ್‌ಟೇಬಲ್ ಮತ್ತು ಪೊಲೀಸ್ ಸಬ್-ಇನ್ಸ್‌ಪೆಕ್ಟರ್ (ಸಿವಿಲ್) ಹುದ್ದೆಗಳಿಗೆ**

**a) ಎತ್ತರ**

i) ಪುರುಷ : 155 ಸೆಂ.ಮೀ

ii) ಮಹಿಳೆ : 150 ಸೆಂ.ಮೀ

**b)** ಎದೆ ಸುತ್ತಳತೆ (ಪುರುಷರಿಗೆ ಮಾತ್ರ): 81 ಸೆಂ.ಮೀ. ಸಾಮಾನ್ಯ, ವಿಸ್ತರಣೆ 5 ಸೆಂ.ಮೀ.)

**c)** ತೂಕ (ಮಹಿಳೆಯರಿಗೆ ಮಾತ್ರ): 45 ಕೆ.ಜಿ.

ಅಭ್ಯರ್ಥಿಗಳು ದೇಹದಾರ್ಢ್ಯತೆ ಪರೀಕ್ಷೆಗೆ ಹಾಜರಾಗುವಾಗ, ಈ ಕೆಳಕಂಡ ಯಾವುದಾದರೊಂದು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು ಮತ್ತು ಅದರ ಒಂದು ದೃಢೀಕೃತ ಪ್ರತಿಯನ್ನು ನೀಡುವುದು.

i) ಪಾಸ್‌ಪೋರ್ಟ್ (Passport)
ii) ಚಾಲನಾ ಪರವಾನಗಿ ಪತ್ರ (Driving License)
iii) ಪ್ಯಾನ್ ಕಾರ್ಡ್ (PAN Card)
iv) ರಾಜ್ಯ ಸರ್ಕಾರ/ ಕೇಂದ್ರ ಸರ್ಕಾರ / ಸಾರ್ವಜನಿಕ ಸ್ವಾಮ್ಯದ ಅಥವಾ ಸರ್ಕಾರದ ಅಧೀನಕ್ಕೊಳಪಟ್ಟ ಖಾಸಗೀ ಕಂಪನಿಗಳು ವಿತರಿಸಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ (Service ID Card)
v) ಸಾರ್ವಜನಿಕ ಬ್ಯಾಂಕುಗಳು / ಅಂಚೆ ಕಛೇರಿಗಳು ವಿತರಿಸಿರುವ ಭಾವಚಿತ್ರವಿರುವ ಪಾಸ್ ಪುಸ್ತಕ (Bank Pass Book with Photograph)
vi) ಭಾವಚಿತ್ರ ಸಮೇತ ನೋಂದಣಿಯಾಗಿರುವ ಸ್ವತ್ತಿನ ದಾಖಲೆಪತ್ರ ಅಥವಾ ಪಟ್ಟಾ ಪುಸ್ತಕ (Pattas and registered deeds with Photograph)
vii) ಭಾವಚಿತ್ರ ಸಮೇತ ಸಂಬಂಧಪಟ್ಟ ಪ್ರಾಧಿಕಾರಿಯವರು ವಿತರಿಸಿರುವ ಜಾತಿ ಪ್ರಮಾಣ ಪತ್ರ (Community Certificate with Photo)
viii) ಮಾಜಿ ಸೈನಿಕ ಅಭ್ಯರ್ಥಿಗಳಿಗೆ ವಿತರಿಸಿರುವ ಪಿಂಚಣಿ ಪುಸ್ತಕ / ಪಿಂಚಣಿ ಮಂಜೂರಾತಿ ಆಗಿರುವ ಆದೇಶ (Ex-servicemen's pension book/pension payment order)
ix) ಎನ್.ಆರ್.ಇ.ಜಿ.ಎಸ್.ಯಿಂದ ನೀಡಿದ ಭಾವಚಿತ್ರವಿರುವ ಉದ್ಯೋಗ ಚೀಟಿ. (Job cards with Photograph)
x) ಎಲೆಕ್ಟೋರಲ್ ಪೋಟೋ ಗುರುತಿನ ಚೀಟಿ (EPIC).
xi) ಭಾರತೀಯ ಗುರುತು ಪ್ರಾಧಿಕಾರದಿಂದ ನೀಡಲಾಗಿರುವ ಆಧಾರ್ ಕಾರ್ಡ್(AADHAR CARD).

ಕರೆಪತ್ರದ ಜೊತೆಗೆ ಆನ್‌ಲೈನ್ ಅರ್ಜಿಯ ಜೆರಾಕ್ಸ್ ಪ್ರತಿಯನ್ನು ಸಹ ತರತಕ್ಕದ್ದು, ತಪ್ಪಿದ್ದಲ್ಲಿ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ. ನಿಗದಿತ ದಿನಾಂಕ ಹಾಗೂ ಸಮಯದಲ್ಲಿ ಹಾಜರಾಗದಿದ್ದರೆ ಅಂತಹವರನ್ನು ಅನರ್ಹ ಗೊಳಿಸಲಾಗುವುದು ಹಾಗೂ ಬದಲಿ ದಿನಾಂಕವನ್ನು ನೀಡಲಾಗುವುದಿಲ್ಲ.

24) ದೇಹದಾರ್ಢ್ಯತೆ ಪರೀಕ್ಷೆಯನ್ನು ಯಾರು ನಡೆಸುತ್ತಾರೆ?
ಉ: ದೇಹದಾರ್ಢ್ಯತೆ ಪರೀಕ್ಷೆಯನ್ನು ಡಿಜಿ ಮತ್ತು ಐಜಿಪಿ ರವರಿಂದ ನಾಮನಿರ್ದೇಶಿಸಲ್ಪಟ್ಟ ಐಜಿಪಿ / ಡಿಐಜಿಪಿ ದರ್ಜೆಯ ಅಧಿಕಾರಿಗಳ ನೇತೃತ್ವದಲ್ಲಿ ರಚಿಸಲ್ಪಟ್ಟ ಸಮಿತಿಯು ನಡೆಸುತ್ತದೆ.

25). ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅನುತ್ತೀರ್ಣರಾದವರು ಮೇಲ್ಮನವಿ ಸಲ್ಲಿಸಲು ಅವಕಾಶವಿದೆಯೇ?
ಉ: ಇಲ್ಲ. ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ಅಭ್ಯರ್ಥಿಗಳು ಮೇಲ್ಮನವಿ ಸಲ್ಲಿಸಲು ಅವಕಾಶವಿಲ್ಲ. ನೇಮಕಾತಿ ಸಮಿತಿಯು ನಡೆಸುವ ಪರೀಕ್ಷೆಯೇ ಅಂತಿಮವಾಗಿದ್ದು, ಇತರೆ ವೈದ್ಯಾಧಿಕಾರಿಗಳು ನೀಡುವ ಪ್ರಮಾಣ ಪತ್ರಗಳನ್ನು ಗಣನೆಗೆ ತೆಗೆದುಕೊಳ್ಳಲಾಗುವುದಿಲ್ಲ.

26). ದೇಹದಾರ್ಢ್ಯತೆ ಪರೀಕ್ಷೆಗೆ ಅಂಕಗಳನ್ನು ನೀಡಲಾಗುತ್ತದೆಯೇ?
ಉ: ಇಲ್ಲ. ಈ ಪರೀಕ್ಷೆಯನ್ನು ಕೇವಲ ಮುಂದಿನ ಪ್ರಕ್ರಿಯೆಗೆ ಭಾಗವಹಿಸಲು ಅರ್ಹತೆಯನ್ನು ಪಡೆಯಲು ಮಾತ್ರ ನಡೆಸಲಾಗುವುದು.

27) ದೇಹದಾರ್ಢ್ಯತೆ / ವೈದ್ಯಕೀಯ ಪರೀಕ್ಷೆಯಲ್ಲಿ ಅನುತ್ತೀರ್ಣರಾದರೆ ಇತರೆ ವೈದ್ಯರಿಂದ ಪ್ರಮಾಣ ಪತ್ರ ಪಡೆದು ನೀಡಬಹುದೇ?
ಉ: ಇಲ್ಲ. ಇತರೆ ಯಾವುದೇ ವೈದ್ಯರಿಂದ ಪಡೆದ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ. ನೇಮಕಾತಿ ಸಮಿತಿಯಿಂದ ನಿರ್ದೇಶಿಸಲ್ಪಟ್ಟಿರುವ ಅಧಿಕಾರಿಗಳು ತಪಾಸಣೆಯ ನಂತರ ನೀಡಲಾಗುವ ಪ್ರಮಾಣ ಪತ್ರವನ್ನು ಮಾತ್ರ

ಪರಿಗಣಿಸಲಾಗುವುದು ಹಾಗೂ ವೈದ್ಯಕೀಯ ಮಂಡಳಿಯ ಮುಂದೆ ವೈದ್ಯಕೀಯ ಪರೀಕ್ಷೆಯನ್ನು ನಡೆಸಲಾಗುತ್ತಿದ್ದು, ವೈದ್ಯಕೀಯ ಮಂಡಳಿಯು ನೀಡುವ ಪ್ರಮಾಣ ಪತ್ರದಲ್ಲಿನ ಫಲಿತಾಂಶವೆ ಅಂತಿಮವಾಗಿರುತ್ತದೆ.

**ಅರ್ಹತಾ ಷರತ್ತುಗಳು:**

e) ಭಾರತೀಯ ನಾಗರಿಕನಾಗಿರತಕ್ಕದ್ದು.

f) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ, ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

g) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

h) **"ಪ್ರಶಂಸನೀಯ ಕ್ರೀಡಾಪಟು"** ಎಂದರೆ ಭಾರತಿಯ ನಾಗರಿಕನು ಕ್ರಮ ಸಂಖ್ಯೆ:07ರ Table-1ರಲ್ಲಿ ತಿಳಿಸಲಾಗಿರುವ ಯಾವುದಾದರೂ ಕ್ರೀಡೆಗಳಲ್ಲಿ ನಿರ್ದಿಷ್ಟ ಪಡಿಸಿರುವ ವಲಯ, ರಾಷ್ಟ್ರಿಯ ಅಥವಾ ಅಂತರಾಷ್ಟ್ರೀಯ ಕ್ರೀಡೆಗಳಲ್ಲಿ ಭಾಗವಹಿಸಿ ಕ್ರಮ ಸಂಖ್ಯೆಳ–08ರ Table-2ರಲ್ಲಿನ ಪದಕಗಳನ್ನು ಪಡೆದಿರಬೇಕು ಹಾಗೂ ಸದರಿ ಕ್ರೀಡೆಗಳಲ್ಲಿನ ಸಾಧನೆಯನ್ನು ಮಾಡುವ ಪೂರ್ವದಲ್ಲಿ ಕನಿಷ್ಟ 05 ವರ್ಷಗಳ ಕಾಲ ಕರ್ನಾಟಕದಲ್ಲಿ ವಾಸವಾಗಿರಬೇಕು.
ಅಲ್ಲದೆ ಪ್ರಶಂಸನಿಯ ಕ್ರೀಡಾಪಟುಗಳು ಒಲಂಪಿಕ್ಸ್ ಅಥವಾ ಏಷಿಯನ್ ಗೇಮ್ಸ್ ಅಥವಾ ಕಾಮನ್‌ವೆಲ್ತ್ ಗೇಮ್ಸ್ ಕ್ರೀಡಾಕೂಟಗಳಲ್ಲಿ ಭಾಗವಹಿಸುವ 05 ವರ್ಷಗಳ ಮೊದಲು ರಾಷ್ಟ್ರೀಯ ಕ್ರೀಡಾಕೂಟಗಳಲ್ಲಿ ಕನಿಷ್ಟ 3ವರ್ಷಗಳ ಕಾಲ ಕರ್ನಾಟಕವನ್ನು ಪ್ರತಿನಿಧಿಸಿರಬೇಕು.

ಈ ಕೆಳಗಿನ ಕೋಷ್ಟಕದಲ್ಲಿ ನಮೂದಿಸಿರುವ ವಲಯ, ರಾಷ್ಟಿಯ ಅಥವಾ ಅಂತರ್‌ರಾಷ್ಟ್ರಿಯ ಕ್ರೀಡೆ ಅಥವಾ ಕ್ರೀಡಾಕೂಟದಲ್ಲಿ ವೈಯಕ್ತಿಕವಾಗಿ ಅಥವಾ ತಂಡದಲ್ಲಿ ಒಬ್ಬ ಸದಸ್ಯನಾಗಿ ಭಾಗವಹಿಸಿರುವ ಅಭ್ಯರ್ಥಿಯನ್ನು ಮಾತ್ರ ಪ್ರಶಂಸನೀಯ ಕ್ರೀಡಾಪಟು ಎಂದು ಪರಿಗಣಿಸಲಾಗುತ್ತದೆ.

TABLE-1

| Sl. No. | Names of the Sports/ Games |
|---|---|
| 1 | Athletics |
| 2 | Archery |
| 3 | Basketball |
| 4 | Boxing |
| 5 | Cycling |
| 6 | Fencing |
| 7 | Football |
| 8 | Gymnastics |
| 9 | Hockey |
| 10 | Handball |
| 11 | Judo |
| 12 | Kabaddi |
| 13 | Shooting(Sports) |

| | |
|---|---|
| 14 | Volleyball |
| 15 | Weightlifting |
| 16 | Wrestling |
| 17 | Swimming (Aquatic) |
| 18 | Water sports - Rowing, Kayaking & Kenoying |
| 19 | Tennis |
| 20 | Badminton |

**<u>ಅರ್ಹ ಅಭ್ಯರ್ಥಿಗಳ ಪಟ್ಟಿ:</u>**

ಅರ್ಹ ಪ್ರಶಂಸನೀಯ ಕ್ರೀಡಾಪಟು ಅಭ್ಯರ್ಥಿಗಳಿಂದ ಸ್ವೀಕರಿಸಲಾದ ಅರ್ಜಿಗಳನ್ನು ಸಮಿತಿಯು ಈ ಕೆಳಗೆ ನೀಡಲಾದ ಕೋಷ್ಟಕದಲ್ಲಿ (ಟೇಬಲ್) ನಮೂದಿಸಿರುವ ಕ್ರೀಡೆಗಳಿಗೆ ಕಾಲಂ–3ರಲ್ಲಿ ನಮೂದಿಸಿರುವ ಶ್ರೇಣಿ ಅಥವಾ ಕೃಪಾಂಕಗಳ ಆದಾರದ ಮೇಲೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ತಯಾರಿಸಲಾಗುವುದು.

TABLE-2

| Sl. No. | Achievements in the Sports / Games Competitions | Grading or Weightage Marks |
|---|---|---|
| **(1)** | **(2)** | **(3)** |
| 1 | Gold Medal in Olympic Games | 75 |
| 2 | Silver Medal in Olympic Games | 74 |
| 3 | Bronze Medal in Olympic Games | 73 |
| 4 | Gold Medal in World Championship/Cup for Seniors-Grand Slam Tennis | 72 |
| 5 | Silver Medal in World Championship/Cup for Seniors- Grand Slam Tennis | 71 |
| 6 | Bronze Medal in World Championship/Cup for Seniors- Grand Slam Tennis | 70 |
| 7 | Gold Medal in Davis Cup. | 69 |
| 8 | Silver Medal in Davis Cup | 68 |
| 9 | Bronze Medal in -Davis Cup. | 67 |
| 10 | Participation in Olympic Games-World Championship/Cup-Wimbledon-U.S. Open- French Open-Australian Open. | 66 |
| 11 | Gold Medal in Asian Games-Commonwealth Games | 64 |
| 12 | Silver Medal in Asian Games-Commonwealth Games | 63 |
| 13 | Bronze Medal in Asian Games-Commonwealth Games | 62 |
| 14 | Gold Medal in Commonwealth Championship | 61 |
| 15 | Silver Medal Commonwealth Championship | 60 |
| 16 | Bronze Medal in Commonwealth Championship | 59 |
| 17 | Participation in Asian Games-Commonwealth Games | 58 |
| 18 | Gold Medal in SAF Games-SAARC Championship | 57 |
| 19 | Silver Medal in SAF Games-SAARC Championship | 56 |
| 20 | Bronze Medal in SAF Games-SAARC Championship | 55 |
| 21 | Participation in Commonwealth Championship - Davis Cup. | 54 |
| 22 | Gold Medal in National Championship - National Games. | 53 |
| 23 | Silver Medal in National Championship - National Games. | 52 |
| 24 | Bronze Medal in National Championship - National Games. | 51 |

| | | |
|---|---|---|
| 25 | Participation in SAF Games-SAARC Championship | 50 |
| 26 | Participation in National Championship - National Games. | 49 |
| 27 | Gold Medal in South Zone for seniors | 48 |
| 28 | Silver Medal in South Zone for seniors. | 47 |
| 29 | Bronze Medal in South Zone for seniors | 46 |

ಬಿ) ಅರ್ಜಿ ಸಲ್ಲಿಸಿದ ದಿನಾಂಕಕ್ಕೆ ಪ್ರಶಂಸನೀಯ ಕ್ರೀಡಾಪಟುವಿನ ಸಾಧನೆ 10 ವರ್ಷದೊಳಗೆ ಇಲ್ಲದಿದ್ದರೆ ಅಂತಹ ಅಭ್ಯರ್ಥಿಯು ಆಯ್ಕೆಗೆ ಅರ್ಹನಾಗಿರುವುದಿಲ್ಲ, ಒಂದು ಪಕ್ಷ ಒಬ್ಬ ಪ್ರಶಂಸನೀಯ ಕ್ರೀಡಾಪಟು ಒಂದಕ್ಕಿಂತ ಹೆಚ್ಚು ಪದಕಗಳನ್ನು ಗೆದ್ದಿದ್ದಲ್ಲಿ ಅಂತಹ ಪದಕಗಳಲ್ಲಿ ಅತ್ಯುನ್ನತ ಪದಕವನ್ನು ಉಪ ನಿಯಮ (3) ರನ್ವಯ ಶ್ರೇಣಿ ಅಥವಾ ಕೃಪಾಂಕಗಳ ಆದಾರದ ಮೇಲೆ ಪರಿಗಣಿಸಲಾಗುವುದು.

Definitions.- (1) In these rules unless the context otherwise requires,-

a) "Asian Games or Asaid" means the games organized by the Olympic Council of Asia having its Headquarters at Kuwait or any other place declared as such by it and recognized by the International Olympic Committee;
b) "Commonwealth Games" means the quadrennial games organized by the Commonwealth Games Federation, an international organization, having its Headquarters at London, England, United Kingdom or any other place declared as such by it;
c) "Davis Cup" means the annual international team event in men's tennis organized by the International Tennis Federation (ITF), having its headquarters at London, England, United Kingdom;
d) "Meritorious Sportsperson" means a citizen of India who has participated in any of the sports or games listed in the table in sub-rule (2) of rule 4 and won medals in the zonal, national or international events as specified in the table in sub-rule (3) of rule 4 and domiciled in Karnataka for at least five years prior to his achievement in such events. Provided that, in the case of a meritorious sportsperson, who has participated in Olympics or Asian Games or Commonwealth Games, he must have represented Karnataka for at least three years in the national level tournaments during the five years immediately preceding his participation in Olympic or Asian Games or Commonwealth Games.
e) "National Championship" means the annual championship organized by the respective sports associations affiliated to the Indian Olympic Association;
f) "National Games" means the quadrennial National Games organized by the Indian Olympic Association;
g) "Olympic Games/Olympiad" means the summer Olympic Games organized by the international Olympic Committee having its headquarters at Lausanne, Switzerland or any other place declared as such by it and does not include winter Olympic Games or any other Olympic Games.
h) "Police Service" includes service under police (civil), wireless, City Armed Reserve, District Armed Reserve, Karnataka State Reserve Police and Karnataka Industrial Security Force.

i) "SAARC Championship or South Asian Federation Games" means the biennial multi-sport event organized by South Asian Olympic Council having its headquarters at Kathmandu, Nepal;

j) "South Zone for Seniors" means the annual championship organized among the South Indian States by the respective sports associations for persons above 19 years affiliated to the Indian Olympic Association;

29) ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಹೇಗೆ ತಯಾರಿಸಲಾಗುತ್ತದೆ ?

ಉ: ಟೇಬಲ್-2ರಲ್ಲಿನ ಕಾಲಂ(3) ರಲ್ಲಿರುವಂತೆ ಅಭ್ಯರ್ಥಿಗಳು ಗಳಿಸಿದ ಶ್ರೇಣಿ ಅಥವಾ ಕೃಪಾಂಕಗಳೊಂದಿಗೆ ಗಳಿಸಿರುವ ಅಂಕಗಳನುಸಾರ ನೇಮಕಾತಿಗೆ ಸೂಕ್ತವಾಗಿರುವ ಅಭ್ಯರ್ಥಿಗಳ ಅರ್ಹತಾ ಪಟ್ಟಿಯ ಆದಾರದ ಮೇಲೆ ಜಾಹಿರಾತಿನಲ್ಲಿ ಪ್ರಕಟಿಸಲಾಗಿರುವ ಹುದ್ದೆಗಳ ಸಂಖ್ಯೆಗೆ ಅನುಗುಣವಾಗಿ ಆಯ್ಕೆಪಟ್ಟಿಯನ್ನು ತಯಾರಿಸಲಾಗುವುದು.

ಸಮಿತಿಯಿಂದ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಇಲಾಖೆಯ ಅಧಿಕೃತ ವೆಬ್‌ಸೈಟ್‌ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗುವುದು. ಸದರಿ ಆಯ್ಕೆ ಪಟ್ಟಿಗೆ ಸಂಬಂಧಿಸಿದಂತೆ, ಅಭ್ಯರ್ಥಿಯು ಯಾವುದಾದರು ಆಕ್ಷೇಪಣೆಯನ್ನು ಸಲ್ಲಿಸಬೇಕಾದಲ್ಲಿ ಆಯ್ಕೆ ಪಟ್ಟಿಯನ್ನು ಪ್ರಕಟಿಸಿದ 15 ದಿನಗಳ ಒಳಗಾಗಿ ಸಮಿತಯ ಸದಸ್ಯ ಕಾರ್ಯದರ್ಶಿಗಳಿಗೆ ವಿಳಾಸಿಸಿ ಸಲ್ಲಿಸತಕ್ಕದ್ದು,

**ಟಿಪ್ಪಣಿ:** ತಾತ್ಕಾಲಿಕ ಅರ್ಹತಾ ಪಟ್ಟಿಯಲ್ಲಿ ಹೆಸರನ್ನು ಒಳಗೊಂಡಿರುವ ಅಭ್ಯರ್ಥಿಗಳು ಸಹಿಷ್ಣುತೆ ಪರೀಕ್ಷೆಗೆ ಹಾಜರಾಗುವ ಅವಶ್ಯಕತೆ ಇರುವುದಿಲ್ಲ.

(**ಹೆಚ್ಚಿನ ಮಾಹಿತಿಗಾಗಿ ನೇಮಕಾತಿ ಅಧಿಸೂಚನೆಯನ್ನು ನೋಡುವುದು**).

**<u>ಕ್ರೀಡೆಗಳಲ್ಲಿ ಸಾಧನೆ ಅಥವಾ ಅನ್ವಯವಾಗುವ ಕ್ರೀಡೆಗಳು</u>**

a) **ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್) ಹುದ್ದೆಗಳಿಗೆ :** ಟೇಬಲ್-2ರಲ್ಲಿನ ಕಾಲಂ(3) ರಲ್ಲಿರುವಂತೆ 46 ಅಂಕ ಅಥವಾ ಹೆಚ್ಚು ಅಂಕಗಳನ್ನು ಹೊಂದಿರಬೇಕು.

b) **ಪೊಲೀಸ್ ಸಬ್-ಇನ್ಸ್‌ಪೆಕ್ಟರ್ (ಸಿವಿಲ್) ಹುದ್ದೆಗಳಿಗೆ:** ಟೇಬಲ್-2ರಲ್ಲಿನ ಕಾಲಂ(3) ರಲ್ಲಿರುವಂತೆ 50 ಅಂಕ ಅಥವಾ ಹೆಚ್ಚು ಅಂಕಗಳನ್ನು ಹೊಂದಿರಬೇಕು.

**ಹುದ್ದೆಗಳಿಗೆ ಆಯ್ಕೆಪಟ್ಟಿಯನ್ನು ತಯಾರಿಸುವಾಗ ಈ ಮೇಲಿನ ಅಂಶವನ್ನು ಪರಿಗಣಿಸಲಾಗುವುದು.**

30) ವೈದ್ಯಕೀಯ ಪರೀಕ್ಷೆ ಎಂದರೇನು? ಇದರಲ್ಲಿ ಯಾವ ರೀತಿಯ ವೈದ್ಯಕೀಯ ಪರೀಕ್ಷೆಯನ್ನು ನಡೆಸಲಾಗುತ್ತದೆ?

ಉ: ತಾತ್ಕಾಲಿಕವಾಗಿ ಆಯ್ಕೆಯಾದ ಅಭ್ಯರ್ಥಿಗಳನ್ನು ನೇಮಕಾತಿ ಸಮಿತಿಯು ರಚಿಸಿದ ಒಂದು ವೈದ್ಯಕೀಯ ಮಂಡಳಿಯ ಮುಂದೆ ಹಾಜರುಪಡಿಸಿ ವೈದ್ಯಕೀಯ ಪರೀಕ್ಷೆಯನ್ನು ನಡೆಸಲಾಗುತ್ತದೆ. ಇದರಲ್ಲಿ ಕಣ್ಣಿನ ಪರೀಕ್ಷೆ, ಶ್ರವಣ ಶಕ್ತಿ, ಅಪಧಮನಿ ಊತ, ಮಾತಿನಲ್ಲಿ ಅಡಚಣೆ ಮತ್ತು ಕ್ಷ-ಕಿರಣದ ಪರೀಕ್ಷೆಗಳನ್ನು ನಡೆಸಲಾಗುತ್ತದೆ.
(ಹೆಚ್ಚಿನ ಮಾಹಿತಿಗಾಗಿ ನೇಮಕಾತಿ ಅಧಿಸೂಚನೆಯನ್ನು ನೋಡುವುದು).

31) ಮೂಲ ದಾಖಲೆ ಎಂದರೇನು ?

ಉ: ಮೂಲ ದಾಖಲೆ ಎಂದರೆ ಯಾವ ಹುದ್ದೆಗೆ ಸೇರಲು ಬಯಸುತ್ತಾರೋ ಆ ಹುದ್ದೆಗೆ ನಿಗದಿ ಪಡಿಸಿದ ವಿದ್ಯಾರ್ಹತೆಯ ಅಂಕಪಟ್ಟಿ / ಪ್ರಮಾಣ ಪತ್ರ, ಹುಟ್ಟಿದ ದಿನಾಂಕದ ದಾಖಲೆ ಹಾಗೂ ಮೀಸಲಾತಿಗಳನ್ನು ಕೋರಿದ್ದಲ್ಲಿ ಅಂತಹ ಪ್ರಮಾಣ ಪತ್ರದ ಮೂಲ ಪ್ರತಿಗಳು.

32) ಮೂಲ ದಾಖಲೆಗಳನ್ನು ಯಾವಾಗ ಹಾಜರುಪಡಿಸಬೇಕು ?

ಉ: ನೇಮಕಾತಿ ಪ್ರಾಧಿಕಾರವು ಯಾವ ಹಂತದಲ್ಲಿಯಾದರೂ ಹಾಜರುಪಡಿಸಲು ಸೂಚಿಸಬಹುದು. ಅಭ್ಯರ್ಥಿಯು ಮೂಲ ದಾಖಲೆಗಳನ್ನು ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಹಾಜರುಪಡಿಸಲು ಸೂಚಿಸಿದಾಗ ಹಾಜರುಪಡಿಸತಕ್ಕದ್ದು.

33). ಮೂಲ ತರಬೇತಿ ಎಂದರೇನು ?

ಉ: ನೇಮಕಾತಿ ಹೊಂದಿದ ಅಭ್ಯರ್ಥಿಗಳು ಪೊಲೀಸ್ ಇಲಾಖೆಯು ತೀರ್ಮಾನಿಸಿದ ತರಬೇತಿ ಕೇಂದ್ರದಲ್ಲಿ ಮೂಲ / ಬುನಾಧಿ ತರಬೇತಿಯನ್ನು ಪಡೆಯಬೇಕಾಗಿದ್ದು, ತರಬೇತಿಯ ಕೊನೆಯಲ್ಲಿ ನಿಗದಿಪಡಿಸಿದ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಬೇಕು. (ಹೆಚ್ಚಿನ ಮಾಹಿತಿಗಾಗಿ ನೇಮಕಾತಿ ಅಧಿಸೂಚನೆಯನ್ನು ನೋಡುವುದು).

34) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, 2ಎ, 2ಬಿ, 3ಎ ಮತ್ತು 3ಬಿ ಅಭ್ಯರ್ಥಿಗಳು ಯಾವ ಜಾತಿ ಪ್ರಮಾಣ ಪತ್ರದ ಫಾರಂನ್ನು ಹಾಜರುಪಡಿಸಬೇಕು?

ಉ: ಜಾತಿ ಮೀಸಲಾತಿ ಕೋರ ಬಯಸುವ ಅಭ್ಯರ್ಥಿಗಳು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಸಹಿ ಮತ್ತು ಮೇಲು ರುಜು ಮಾಡಿಸಿ ಮತ್ತು ಮೊಹರಿನೊಂದಿಗೆ ಈ ಕೆಳಕಂಡ ನಮೂನೆಗಳಲ್ಲಿ ಪ್ರಮಾಣ ಪತ್ರಗಳನ್ನು ಮಾಡಿಸಿರಬೇಕು.

| | | |
|---|---|---|
| ಎ) ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ | : | ನಮೂನೆ-ಡಿ |
| ಬಿ) ಪ್ರವರ್ಗ – 1 | : | ನಮೂನೆ-ಇ |
| ಸಿ) ಪ್ರವರ್ಗ- 2ಎ, 2ಬಿ, 3ಎ, 3ಬಿ | : | ನಮೂನೆ – ಎಫ್ |

ಇವುಗಳ ನಮೂನೆಯನ್ನು ಅಧಿಸೂಚನೆಯಲ್ಲಿ ಮಾಹಿತಿಗಾಗಿ ನೀಡಲಾಗಿದೆ.

35). ನೇಮಕಾತಿಯಲ್ಲಿ ವಿವಿಧ ಜಾತಿ ಮತ್ತು ವರ್ಗಗಳಿಗೆ ಎಷ್ಟು ಮೀಸಲಾತಿಯನ್ನು ನೀಡಲಾಗುತ್ತದೆ ?

ಉ:

| | | |
|---|---|---|
| ಸಾಮಾನ್ಯ ವರ್ಗ | – | 50% |
| ಪರಿಶಿಷ್ಟ ಜಾತಿ | – | 15% |
| ಪರಿಶಿಷ್ಟ ಪಂಗಡ | – | 03% |
| ಪ್ರವರ್ಗ- 1 | – | 04% |
| ಪ್ರವರ್ಗ- 2ಎ | – | 15% |
| ಪ್ರವರ್ಗ- 2ಬಿ | – | 04% |
| ಪ್ರವರ್ಗ- 3ಎ | – | 04% |
| ಪ್ರವರ್ಗ- 3ಬಿ | – | 05% |

(ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ/08/ಸೆಹಿಮ/95, ದಿನಾಂಕ: 20.06.1995 ರಲ್ಲಿರುವಂತೆ)

36). ಗ್ರಾಮೀಣ ಅಭ್ಯರ್ಥಿ ಎಂದರೇನು ? ಪ್ರಮಾಣ ಪತ್ರವನ್ನು ಯಾರಿಂದ ಮತ್ತು ಯಾವಾಗ ಪಡೆದಿರಬೇಕು?

ಉ: 1ನೇ ತರಗತಿಯಿಂದ 10ನೇ ತರಗತಿಯವರೆಗೆ ನಿರಂತರವಾಗಿ ಗ್ರಾಮೀಣ ಪ್ರದೇಶದಲ್ಲಿ ವ್ಯಾಸಂಗ ಮಾಡಿರುವ ಅಭ್ಯರ್ಥಿಗಳಿಗೆ ಗ್ರಾಮೀಣ ಅಭ್ಯರ್ಥಿ ಎನ್ನುತ್ತಾರೆ. ಗ್ರಾಮೀಣ ಮೀಸಲಾತಿ ಪ್ರಮಾಣಪತ್ರವನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಮಾಡಿಸಿರಬೇಕು ಹಾಗು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದ ಒಳಗೆ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ಪಡೆದಿರತಕ್ಕದ್ದು.

37) ಕನ್ನಡ ಮಾಧ್ಯಮ ಅಭ್ಯರ್ಥಿ ಎಂದರೇನು ? ಪ್ರಮಾಣ ಪತ್ರವನ್ನು ಯಾರಿಂದ ಮತ್ತು ಯಾವಾಗ ಪಡೆದಿರಬೇಕು?

ಉ: 1ನೇ ತರಗತಿಯಿಂದ 10ನೇ ತರಗತಿಯವರೆಗೆ ನಿರಂತರವಾಗಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಅಭ್ಯರ್ಥಿಗಳಿಗೆ ಕನ್ನಡ ಮಾಧ್ಯಮ ಅಭ್ಯರ್ಥಿ ಎನ್ನುತ್ತಾರೆ. ಕನ್ನಡ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು

ಮಾಡಿಸಿರಬೇಕು ಹಾಗು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದ ಒಳಗೆ ಕನ್ನಡ ಮಾಧ್ಯಮ ಮೀಸಲಾತಿ ಪ್ರಮಾಣ ಪತ್ರವನ್ನು ಪಡೆದಿರತಕ್ಕದ್ದು.

38). ಯೋಜನಾ ನಿರಾಶ್ರಿತ ಅಭ್ಯರ್ಥಿ ಎಂದರೇನು? ಪ್ರಮಾಣ ಪತ್ರವನ್ನು ಯಾರಿಂದ ಮತ್ತು ಎಂದು ಪಡೆದಿರಬೇಕು?

ಉ: ಸರ್ಕಾರದ ಯೋಜನೆಗಳಿಂದ ತಾವು ಅವಲಂಬಿತರಾಗಿದ್ದ ಕೃಷಿ ಭೂಮಿ, ಮನೆಗಳನ್ನು ಕಳೆದುಕೊಂಡ ಅಭ್ಯರ್ಥಿಗಳನ್ನು ಯೋಜನಾ ನಿರಾಶ್ರಿತ ಅಭ್ಯರ್ಥಿ ಎನ್ನುತ್ತಾರೆ. ಪ್ರಮಾಣ ಪತ್ರವನ್ನು ನಿಗದಿ ಪಡಿಸಿರುವ ನಮೂನೆಯಲ್ಲಿ ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ಪಡೆದು ಅರ್ಜಿ ಸಲ್ಲಿಸಲು ನಿಗದಿ ಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.

39). ಗ್ರಾಮೀಣ ಅಭ್ಯರ್ಥಿಗಳಿಗೆ ಶೇಕಡ ಎಷ್ಟು ಮೀಸಲಾತಿ ನೀಡಲಾಗಿದೆ ?

ಉ: ಗ್ರಾಮೀಣ ಅಭ್ಯರ್ಥಿಗಳಿಗೆ 25% ಮೀಸಲಾತಿ ನೀಡಲಾಗಿದೆ. (ಸರ್ಕಾರದ ಆದೇಶ ಸಂಖ್ಯೆ. ಸಿಆಸುಇ/53/ಸೆನೆನಿ/2007, ದಿನಾಂಕ: 04.01.2008ರ ಪ್ರಕಾರ)

40). ಕನ್ನಡ ಮಾಧ್ಯಮ ಅಭ್ಯರ್ಥಿಗಳಿಗೆ ಶೇಕಡ ಎಷ್ಟು ಮೀಸಲಾತಿ ನೀಡಲಾಗಿದೆ?

ಉ: ಕನ್ನಡ ಮಾಧ್ಯಮ ಅಭ್ಯರ್ಥಿಗಳಿಗೆ 5% ಮೀಸಲಾತಿ ನೀಡಲಾಗಿದೆ. (ಸರ್ಕಾರದ ಆದೇಶ ಸಂಖ್ಯೆ.ಸಿಆಸುಇ/53/ಸೆನೆನಿ/2007, ದಿನಾಂಕ: 04.01.2008ರ ಪ್ರಕಾರ)

41) ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿಗಳಿಗೆ ಶೇಕಡ ಎಷ್ಟು ಮೀಸಲಾತಿ ನೀಡಲಾಗಿದೆ?

ಉ: ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿಗಳಿಗೆ 5% ಮೀಸಲಾತಿ ನೀಡಲಾಗಿದೆ. (ಸರ್ಕಾರದ ಆದೇಶ ಸಂಖ್ಯೆ.ಸಿಆಸುಇ/53/ಸೆನೆನಿ/2007, ದಿನಾಂಕ: 04.01.2008ರ ಪ್ರಕಾರ)

42). ಆನ್-ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ವೆಬ್-ಸೈಟ್ ಯಾವುದು ?

ಉ: ಆನ್-ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಹಾಗೂ ಮಾಹಿತಿಯನ್ನು ತಿಳಿದುಕೊಳ್ಳಲು http/:recruitment. ksp.gov.in ನ್ನು ನೋಡುವುದು.

43). ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ಹುದ್ದೆಗೆ ವೇತನ ಶ್ರೇಣಿ ಎಷ್ಟು ?

ಉ: ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ಹುದ್ದೆಗೆ ವೇತನ ಶ್ರೇಣಿ ರೂ. ₹. 37900-950-39800-1100-46400-1250-53900-1450-65600-1650-70850 ಇರುತ್ತದೆ.

44). ದೇಹದಾರ್ಢ್ಯತೆ ಪರೀಕ್ಷೆಗೆ ಹಾಜರಾದಾಗ ಯಾವ ಗುರುತಿನ ಚೀಟಿಯನ್ನು ಹಾಜರು ಪಡಿಸಬೇಕಾಗುತ್ತದೆ ?

ಉ: ಈ ಕೆಳಗಿನ ಯಾವುದಾದರೊಂದು ಭಾವಚಿತ್ರವುಳ್ಳ ಗುರುತಿನ ಚೀಟಿಯನ್ನು ತೋರಿಸಬೇಕು.

i) ಪಾಸ್‌ಪೋರ್ಟ್ (Passport)

ii) ಚಾಲನಾ ಪರವಾನಗಿ ಪತ್ರ (Driving License)

iii) ಪಾನ್ ಕಾರ್ಡ್ (PAN Card)

iv) ರಾಜ್ಯ ಸರ್ಕಾರ/ ಕೇಂದ್ರ ಸರ್ಕಾರ / ಸಾರ್ವಜನಿಕ ಸ್ವಾಮ್ಯದ ಅಥವಾ ಸರ್ಕಾರದ ಅಧೀನಕ್ಕೊಳಪಟ್ಟ ಖಾಸಗಿ ಕಂಪನಿಗಳು ವಿತರಿಸಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ (Service ID Card)

v) ಸಾರ್ವಜನಿಕ ಬ್ಯಾಂಕುಗಳು / ಅಂಚೆ ಕಛೇರಿಗಳು ವಿತರಿಸಿರುವ ಭಾವಚಿತ್ರವಿರುವ ಪಾಸ್ ಪುಸ್ತಕ (Pass Book with Photograph)

vi) ಭಾವಚಿತ್ರ ಸಮೇತ ನೋಂದಣಿಯಾಗಿರುವ ಸ್ವತ್ತಿನ ದಾಖಲೆ ಪತ್ರ ಅಥವಾ ಪಟ್ಟಾ ಪುಸ್ತಕ (Pattas and registered deeds with Photograph)

vii) ಭಾವಚಿತ್ರ ಸಮೇತ ಸಂಬಂಧಪಟ್ಟ ಪ್ರಾಧಿಕಾರಿಯವರು ವಿತರಿಸಿರುವ ಜಾತಿ ಪ್ರಮಾಣ ಪತ್ರ (Caste Certificate with Photo)

viii) ಮಾಜಿ ಸೈನಿಕ ಅಭ್ಯರ್ಥಿಗಳಿಗೆ ವಿತರಿಸಿರುವ ಪಿಂಚಣಿ ಪುಸ್ತಕ / ಪಿಂಚಣಿ ಮಂಜೂರಾತಿ ಆಗಿರುವ ಆದೇಶ (Ex-servicemen's pension book/pension payment order)

ix) ಎನ್.ಆರ್.ಇ.ಜಿ.ಎಸ್.ಯಿಂದ ನೀಡಿದ ಭಾವಚಿತ್ರವಿರುವ ಉದ್ಯೋಗ ಚೀಟಿ. (Job cards with Photograph)

x) ಎಲೆಕ್ಟೋರಲ್ ಫೋಟೋ ಗುರುತಿನ ಚೀಟಿ (EPIC).

45). ಶುಲ್ಕವನ್ನು ಯಾವ ವಿಧಾನದಲ್ಲಿ ಪಾವತಿಸಬೇಕು ?

ಉ: ಶುಲ್ಕವನ್ನು ನಗದು ರೂಪದಲ್ಲಿ ಹೆಚ್.ಡಿ.ಎಫ್.ಸಿ ಬ್ಯಾಂಕ್‌ನಲ್ಲಿ ಅಥವಾ ಅಂಚೆ ಕಛೇರಿಗಳಲ್ಲಿ ಮಾತ್ರ ಪಾವತಿಸತಕ್ಕದ್ದು. ಡಿಡಿ, ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ.

46). ವಿಳಾಸದಲ್ಲಿ ಬದಲಾವಣೆ ಇದ್ದಲ್ಲಿ ಅದನ್ನು ಬದಲಾಯಿಸಬಹುದೇ ?

ಉ: ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ವಿಳಾಸ ಬದಲಾವಣೆಯಾಗಿದ್ದಲ್ಲಿ ತಕ್ಷಣದಲ್ಲಿ ಅಭ್ಯರ್ಥಿಗಳು ಲಿಖಿತ ಮೂಲಕ ನೇಮಕಾತಿ ಸಮಿತಿಯ ಗಮನಕ್ಕೆ ತರತಕ್ಕದ್ದು. ಈ ವಿಳಾಸ ಬದಲಾವಣೆಯನ್ನು ಪರಿಗಣಿಸಲು ನೇಮಕಾತಿ ಸಮಿತಿಯು ಪ್ರಯತ್ನಿಸುವುದು. ಆದಾಗ್ಯೂ ಈ ವಿಚಾರದಲ್ಲಿ ನೇಮಕಾತಿ ಸಮಿತಿಯು ಯಾವುದೇ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ. ಈ ಬಗ್ಗೆ ಅಭ್ಯರ್ಥಿಗಳು ಎಚ್ಚರ ವಹಿಸತಕ್ಕದ್ದು.

47). ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಯಾವ ಪ್ರಮಾಣ ಪತ್ರವನ್ನು ಸಲ್ಲಿಸಬೇಕು?

ಉ: ಅಭ್ಯರ್ಥಿಯು ಅರ್ಜಿ ಹಾಕುವ ಸಮಯದಲ್ಲಿ ಯಾವುದೇ ಕೇಂದ್ರ / ರಾಜ್ಯ ಸರ್ಕಾರದ ಅಥವಾ ಸರ್ಕಾರದ ಯಾವುದೇ ಪ್ರಾಧಿಕಾರ ಅಥವಾ ಕೇಂದ್ರ ಅಥವಾ ರಾಜ್ಯ ಸಾರ್ವಜನಿಕ ಸ್ವಾಮ್ಯಗಳಲ್ಲಿ ನೌಕರಿಯಲ್ಲಿದ್ದಲ್ಲಿ ಅಂತಹವರು ಇಲಾಖಾ ಮುಖ್ಯಸ್ಥರ ಅಥವಾ ನೇಮಕಾತಿ ಪ್ರಾಧಿಕಾರದಿಂದ ಸೂಕ್ತ ದೃಢೀಕರಣದ ಸಹಿಯೊಂದಿಗೆ ಸಮುಚಿತ ಮಾರ್ಗದಲ್ಲಿ ಅರ್ಜಿಯನ್ನು ಸಲ್ಲಿಸಬೇಕು ಹಾಗೂ ಪೊಲೀಸ್ ಇಲಾಖೆಯಲ್ಲಿ ನೇಮಕಗೊಂಡಲ್ಲಿ ಪೊಲೀಸ್ ಸೇವೆಗೆ ಕರ್ತವ್ಯದಿಂದ ಬಿಡುಗಡೆ ಮಾಡಲು ಅನುಮತಿ ಪತ್ರ /ನಿರಾಕ್ಷೇಪಣ ಪ್ರಮಾಣ ಪತ್ರವನ್ನು (No Objection Certificate) ಪಡೆದಿಟ್ಟುಕೊಂಡಿದ್ದು, ನೇಮಕಾತಿ ಸಮಿತಿಯು ಸೂಚಿಸಿದಾಗ ಹಾಜರುಪಡಿಸತಕ್ಕದ್ದು.

48). ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ಹುದ್ದೆಗೆ ಯಾರನ್ನು ಅನರ್ಹರೆಂದು ಪರಿಗಣಿಸುತ್ತೀರಿ?

ಉ: 1. ಡಿಪ್ಲೊಮಾ ಮತ್ತು ಐ.ಟಿ.ಐ ನಲ್ಲಿ ಅಭ್ಯಾಸ ಮಾಡಿದ ಫಿಟ್ಟರ್, ಟರ್ನರ್ ಮತ್ತು ಎಲೆಕ್ಟ್ರಿಷಿಯನ್ ಇತ್ಯಾದಿ ವಿದ್ಯಾರ್ಹತೆಗಳು ಪದವಿಗೆ ಸಮಾನವಾಗುವುದಿಲ್ಲ.

2. ಅರ್ಜಿ ಸಲ್ಲಿಸಲು ನಿಗದಿ ಪಡಿಸಿದ ಕೊನೆಯ ದಿನಾಂಕದಂದು ನಿಗದಿತ ವಿದ್ಯಾರ್ಹತೆ ಪಡೆಯಲು ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಅರ್ಹರಾಗಿರುವುದಿಲ್ಲ.

3. ಕರ್ನಾಟಕ ರಾಜ್ಯದ, ಕೇಂದ್ರ ಸರ್ಕಾರದ ಯಾವುದೇ ಸರ್ಕಾರಿ ಹಾಗೂ ಅರೆ ಸರ್ಕಾರಿ ಸಂಸ್ಥೆಯ ಸೇವೆಯಿಂದ ವಜಾಗೊಂಡಿರುವ ನೌಕರರು ನೇಮಕಾತಿಗೆ ಅರ್ಹರಲ್ಲ.

49). ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ಯಾವ ಪ್ರಮಾಣ ಪತ್ರಗಳನ್ನು ಸಲ್ಲಿಸಬೇಕಾಗಿರುತ್ತದೆ.?

ಉ: ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ಯಾವುದೇ ಪ್ರಮಾಣ ಪತ್ರಗಳನ್ನು ಸಲ್ಲಿಸಬೇಕಾಗಿರುವುದಿಲ್ಲ, ಆದರೆ ಪ್ರಮಾಣ ಪತ್ರದ ಮಾಹಿತಿ ಮತ್ತು ಪ್ರಮಾಣ ಪತ್ರ ಪಡೆದ ದಿನಾಂಕ ನಮೂದಿಸಬೇಕಾಗಿರುತ್ತದೆ. ತದನಂತರ, ಅರ್ಹ ಅಭ್ಯರ್ಥಿಗಳು ಮೂಲ ದಾಖಲೆಗಳ ಪರಿಶೀಲನಾ ಸಂದರ್ಭದಲ್ಲಿ ಅರ್ಜಿಯಲ್ಲಿ ನಮೂದಿಸಿರುವ ಎಲ್ಲಾ ಮಾಹಿತಿಗಳಿಗೆ ಪೂರಕವಾಗಿ ಸದರಿ ದಾಖಲೆ / ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸಬೇಕು ಹಾಗೂ ಅರ್ಜಿಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿರಬೇಕು. ತಪ್ಪಿದಲ್ಲಿ ಅಂತಹ ಮೀಸಲಾತಿಯನ್ನು ರದ್ದುಪಡಿಸಲಾಗುವುದು. ಒಂದು ವೇಳೆ, ಸಲ್ಲಿಸಿದ ಪ್ರಮಾಣ ಪತ್ರಗಳು ಕಳೆದು ಹೋದರೆ ನೇಮಕಾತಿ ಸಮಿತಿಯು ಜವಾಬ್ದಾರಿಯಾಗುವುದಿಲ್ಲ.

50). ಅಭ್ಯರ್ಥಿಗಳು ನೇಮಕಾತಿಯ ಯಾವುದೇ ನಿಯಮಗಳನ್ನು ಪ್ರಶ್ನಿಸಬಹುದೇ?

ಉ: ಅಭ್ಯರ್ಥಿಯು ಹುದ್ದೆಗೆ ಅರ್ಜಿ ಸಲ್ಲಿಸಿದ ತಕ್ಷಣ ತಾನು ನಿಯಮ ಮತ್ತು ವಿನಿಯಮಗಳಿಗೆ ಬದ್ಧನಾಗಿರುತ್ತಾನೆ ಎಂದು ಭಾವಿಸಲಾಗಿರುತ್ತದೆ. ಒಂದು ವೇಳೆ, ತಾನು ಸದರಿ ಹುದ್ದೆಗೆ ಆಯ್ಕೆಯಾಗದಿದ್ದ ಪಕ್ಷದಲ್ಲಿ ನಿಯಮಗಳನ್ನು ಪ್ರಶ್ನಿಸಲು ಬರುವುದಿಲ್ಲ.

51). ಅಭ್ಯರ್ಥಿಗಳಿಗೆ ಪತ್ರ ವ್ಯವಹಾರಕ್ಕೆ ಅವಕಾಶವಿರುವುದೇ?

ಉ: ಅಭ್ಯರ್ಥಿಯು ಅಂತರ್‌ಜಾಲದಲ್ಲಿ ಅರ್ಜಿಯನ್ನು ತುಂಬುವಾಗ ನೀಡಿರುವ ಮಾಹಿತಿಗಳ ಅನ್ವಯ ಸಮರ್ಪಕವಾಗಿ ಭರ್ತಿ ಮಾಡದೆ Junk Character /Unknown language ತುಂಬಿದ ಅರ್ಜಿಗಳು ತಿರಸ್ಕೃತವಾದಲ್ಲಿ ತತ್ಸಂಬಂಧ ಯಾವುದೇ ರೀತಿಯ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.

52). ಕಲ್ಯಾಣ-ಕರ್ನಾಟಕ ಪ್ರದೇಶದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದೇ?

ಉ: ಕಲ್ಯಾಣ-ಕರ್ನಾಟಕ ಪ್ರದೇಶದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿರುತ್ತದೆ.

53). ಕಲ್ಯಾಣ-ಕರ್ನಾಟಕ ಪ್ರದೇಶದಲ್ಲಿನ ಅಭ್ಯರ್ಥಿಗಳಿಗೆ ವಯೋಮಿತಿಯಲ್ಲಿ ಸಡಿಲಿಕೆ ಇದೆಯೇ?

ಉ: ಕಲ್ಯಾಣ-ಕರ್ನಾಟಕ ಪ್ರದೇಶದಲ್ಲಿನ ಅಭ್ಯರ್ಥಿಗಳಿಗೆ ವಯೋಮಿತಿಯಲ್ಲಿ ಯಾವುದೇ ಸಡಿಲಿಕೆ ಇರುವುದಿಲ್ಲ.

54) ಕಲ್ಯಾಣ-ಕರ್ನಾಟಕ ಪ್ರದೇಶದಲ್ಲಿನ ಅಭ್ಯರ್ಥಿಗಳು ಹೈದರಾಬಾದ್-ಕರ್ನಾಟಕ ಪ್ರದೇಶದ ಮೀಸಲಾತಿ ಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರವನ್ನು ಪಡೆಯಲು ಅವಶ್ಯಕವಾದ ಪ್ರಮಾಣ ಪತ್ರಗಳಾವುವು?

ಉ: ಒಬ್ಬ ಅಭ್ಯರ್ಥಿಯು ತಾನು ಸ್ಥಳೀಯ ವ್ಯಕ್ತಿಯೆಂದು ಮಾಡಿದ ಕ್ಲೇಮನ್ನು ರುಜುವಾತುಪಡಿಸಲು ಅರ್ಹತಾ ಪ್ರಮಾಣ ಪತ್ರವನ್ನು ನೀಡಲು ಈ ಕೆಳಗಿನ ಪ್ರಮಾಣ ಪತ್ರಗಳನ್ನು ಆಧಾರವಾಗಿಟ್ಟುಕೊಳ್ಳಬಹುದು:

ಎ) ಜನನ ಪ್ರಮಾಣ ಪತ್ರ, ಅಥವಾ

ಬಿ) ವಾಸಸ್ಥಳ ಪ್ರಮಾಣ ಪತ್ರ, ಅಥವಾ

ಸಿ) ವ್ಯಾಸಂಗ ಪ್ರಮಾಣ ಪತ್ರ, ಅಥವಾ

ಡಿ) ವಿವಾಹ ಪ್ರಮಾಣ ಪತ್ರ, ಅಥವಾ

ಇ) ಸ್ವಗ್ರಾಮ (ಅಥವಾ ಸ್ಥಳ) ಪ್ರಮಾಣ ಪತ್ರ, ಅಥವಾ

ಎಫ್) ವಾರಸ ಪ್ರಮಾಣ ಪತ್ರ ಅಥವಾ

ಜಿ) ಈ ಮೇಲಿನ ಪ್ರಮಾಣ ಪತ್ರಗಳ ಒಂದು ಅಥವಾ ಹೆಚ್ಚಿನ ಸಂಯೋಜನೆ

ಅಭ್ಯರ್ಥಿಯು ಮೇಲ್ಕಂಡಂತೆ ತಿಳಿಸಲಾದ ಪ್ರಮಾಣ ಪತ್ರಗಳಲ್ಲಿ ಯಾವುದೇ ಒಂದು ಪ್ರಮಾಣ ಪತ್ರವನ್ನು ಅಥವಾ ಹೆಚ್ಚಿನವುಗಳನ್ನು ಉಪ ವಿಭಾಗಧಿಕಾರಿಗೆ ಸಲ್ಲಿಸತಕ್ಕದ್ದು. ಅವರು ಯುಕ್ತ ಪರಿಶೀಲನೆ ಮತ್ತು ಸಂಕ್ಷಿಪ್ತ ವಿಚಾರಣೆಯನ್ನು ನಡೆಸಿದ ತರುವಾಯ, ಅನುಬಂಧ-'ಎ' ಯಲ್ಲಿರುವಂತ ನಮೂನೆಯಲ್ಲಿ ಅರ್ಹತಾ ಪ್ರಮಾಣ ಪತ್ರವನ್ನು ನೀಡುತ್ತಾರೆ. ಇನ್ನೂ ಹೆಚ್ಚಿನ ವಿವರಗಳಿಗಾಗಿ ಅಧಿಸೂಚನೆಯನ್ನು ಗಮನಿಸತಕ್ಕದ್ದು.

➢ **ಕಲ್ಯಾಣ-ಕರ್ನಾಟಕ ಪ್ರದೇಶಕ್ಕೊಳಪಡುವ (ಸ್ಥಳೀಯ) ಅಭ್ಯರ್ಥಿಗಳು ಕಲ್ಯಾಣ-ಕರ್ನಾಟಕ ಮೀಸಲಾತಿಯ ಸಲುವಾಗಿ ಪಡೆಯಬೇಕಾಗಿರುವ ಪ್ರಮಾಣ ಪತ್ರ:**

**ನೇರ ನೇಮಕಾತಿಯಲ್ಲಿ ಸ್ಥಳೀಯ ವ್ಯಕ್ತಿಯೆಂಬ ಮೀಸಲಾತಿಯನ್ನು ಕ್ಲೇಮು ಮಾಡುವ ಅರ್ಜಿದಾರರು ಒಂದು ಸ್ವಯಂ ಘೋಷಿತ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು. ಪರಂತು ಅರ್ಜಿ ಸಲ್ಲಿಸುವ ದಿನಾಂಕದಂದು ಅರ್ಜಿದಾರರು ಸ್ಥಳೀಯ ವ್ಯಕ್ತಿಯೆಂದು ಅರ್ಹತೆ ಪಡೆಯುವುದು ಕಡ್ಡಾಯವಾಗಿರುತ್ತದೆ. ತಾತ್ಕಾಲಿಕವಾಗಿ ಆಯ್ಕೆಗೊಂಡ ಅಭ್ಯರ್ಥಿಗಳು ದಾಖಲಾತಿ ಪರೀಕ್ಷೆಗಳ ಸಮಯದಲ್ಲಿ ಸಕ್ಷಮ ಪ್ರಾಧಿಕಾರದಿಂದ ನೀಡಲಾದ ಅರ್ಹತಾ ಪ್ರಮಾಣ ಪತ್ರ (ಅನುಬಂಧ-ಎ) ನೀಡತಕ್ಕದ್ದು. ಅರ್ಹತಾ ಪ್ರಮಾಣ ಪತ್ರದಲ್ಲಿ ಸಕ್ಷಮ ಪ್ರಾಧಿಕಾರಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಲಾದ ಅಂತಿಮ ದಿನಾಂಕದಂದು ಅಭ್ಯರ್ಥಿಯು ಸಾರ್ವಜನಿಕ ಉದ್ಯೋಗ ಆದೇಶದಂತೆ ಸ್ಥಳೀಯ ವ್ಯಕ್ತಿಯೆಂದು ಅರ್ಹತೆ ಪಡೆದಿರುತ್ತಾನೆಂದು ಒಂದು ಅಡಿ ಟಿಪ್ಪಣಿಯನ್ನು ದಾಖಲಿಸುವುದು.**

೫೫. ಅರ್ಜಿಯನ್ನು ಮೊಬೈಲ್ ಮುಖಾಂತರ ಸಲ್ಲಿಸಬಹುದೇ ?

ಉತ್ತರ:- ಹೌದು ಅರ್ಜಿಯನ್ನು (Android / Smart Phone) ಹಾಗೂ (Google chrome )ಮುಖಾಂತರ ಸಲ್ಲಿಸಬಹುದು. ಅರ್ಜಿಯಲ್ಲಿ ಮಾಹಿತಿ ಭರ್ತಿ ಮಾಡುವ ಮುನ್ನ ಬಿಳಿ ಹಾಳೆಯ ಮೇಲೆ ತಮ್ಮ ಇತ್ತೀಚಿನ ಭಾವಚಿತ್ರ, ಸಹಿ ಮತ್ತು ಗುರುತಿನ ಚೀಟಿಯನ್ನು ಮತ್ತು ಅವಲಂಭಿತ ಮಾಜಿ ಸೈನಿಕ ಪ್ರಮಾಣ ಪತ್ರ ಹಾಗೂ ಹೆಬ್ಬೆಟ್ಟಿನ ಗುರುತು ಪ್ರತ್ಯೇಕವಾಗಿ Scan ಮಾಡಿಕೊಂಡಿರತಕ್ಕದ್ದು.

ಭಾವಚಿತ್ರ (ಕಲರ್) : 400 X 400 pixel, size =< 250KB
ಸಹಿ ( ಕಪ್ಪು ಶಾಯಿ) : 400X 400 pixel, size =< 250 KB
ಎಡಗೈ ಹೆಬ್ಬೆಟ್ಟಿನ ಗುರುತು : 400X 400 pixel, size =< 250 KB
ಗುರುತಿನ ಚೀಟಿ : 400X 400 pixel, size =< 250 KB
ಮಾಜಿ ಸೈನಿಕ ಅವಲಂಬಿತ ಪ್ರಮಾಣ ಪತ್ರ(ಸೈನಿಕ್ ಬೋರ್ಡ್‌ನಿಂದ ಪಡೆದ): 400X 400 pixel, size =< 250 KB gif, jpg, jpeg and png ಫಾರಮೆಟ್‌ನಲ್ಲಿರ ತಕ್ಕದ್ದು.

ವಿಶೇಷ ಸೂಚನೆ :-

1) ನಿಗದಿಪಡಿಸಿರುವ ನಮೂನೆಯ ಜಾತಿ/ಪ್ರವರ್ಗ ಪ್ರಮಾಣ ಪತ್ರಗಳು ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ಮತ್ತು ಯೋಜನಾ ನಿರಾಶ್ರಿತ ಪ್ರಮಾಣ ಪತ್ರ, ಕನ್ನಡ ಮಾಧ್ಯಮ ಪ್ರಮಾಣ ಪತ್ರ, ಗ್ರಾಮೀಣ ಪ್ರಮಾಣ ಪತ್ರ ಹೈದ್ರಾಬಾದ್-ಕರ್ನಾಟಕ ಮೀಸಲಾತಿ ಪ್ರಮಾಣ ಪತ್ರಗಳನ್ನು ಪಡೆದಿಟ್ಟುಕೊಂಡಿರತಕ್ಕದ್ದು.

2) ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ ದೇಹದಾರ್ಢ್ಯತೆ ಪರೀಕ್ಷೆ ಮತ್ತು ವೈದ್ಯಕೀಯ ಪರೀಕ್ಷೆ ನಡೆಯುವುದರ ಬಗ್ಗೆ ಅರ್ಹಗೊಂಡ ಅಭ್ಯರ್ಥಿಗಳಿಗೆ ಯಾವುದೇ ಪತ್ರ ವ್ಯವಹಾರವನ್ನು ಮಾಡಲಾಗುವುದಿಲ್ಲ ಮತ್ತು ಅಭ್ಯರ್ಥಿಗಳು ಪೊಲೀಸ್ ಇಲಾಖೆಯ ಅಧಿಕೃತ ವೆಬ್‌ಸೈಟ್‌ನ ಮುಖಾಂತರ ಪಡೆಯಬಹುದಾಗಿದೆ.

೩) ಇನ್ನೂ ಹೆಚ್ಚಿನ ಮಾಹಿತಿ ಬೇಕಿದ್ದಲ್ಲಿ ನೇಮಕಾತಿ ಕಛೇರಿಯ ಈ ಕೆಳಕಂಡ ಸಹಾಯವಾಣಿಯ ಸಂಖ್ಯೆ ಮತ್ತು ಇಮೇಲ್ ನಿಂದ ಪಡೆಯಬಹುದಾಗಿರುತ್ತದೆ ಹಾಗೂ ಅರ್ಜಿ ತುಂಬುವ ವಿಧಾನ ಪೊಲೀಸ್ ಇಲಾಖೆಯ ಅಧಿಕೃತ ವೆಬ್‌ಸೈಟ್ **www.ksp.gov.in or www.recruitment.ksp.gov.in** ನಲ್ಲಿನ ಮಾಹಿತಿ ಸೂಚಿಯಲ್ಲಿ ಲಭ್ಯವಿರುತ್ತದೆ.

4) ಸಹಾಯವಾಣಿ ಸಂಖ್ಯೆ. : **080-22943346.**

ವಿಶೇಷ ಸೂಚನೆಗಳು:-

ಎ) ಕಲ್ಯಾಣ ಕರ್ನಾಟಕ ಪ್ರದೇಶದ ಸ್ಥಳೀಯ ವ್ಯಕ್ತಿಗಳು ಸ್ಥಳೀಯ ವೃಂದದ ಹುದ್ದೆ ಹಾಗೂ ಮಿಕ್ಕುಳಿದ ವೃಂದದ (ಪರಸ್ಥಳೀಯ) ಹುದ್ದೆ ಈ ಎರಡೂ ವೃಂದದ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.

ಬಿ) ಒಂದು ವೇಳೆ ಕಲ್ಯಾಣ ಕರ್ನಾಟಕ ಪ್ರದೇಶದ ಸ್ಥಳೀಯ ಅಭ್ಯರ್ಥಿಯು ಪ್ರಸ್ತುತ ನೇಮಕಾತಿಗೆ ಸಂಬಂಧಿಸಿದಂತೆ ಮಿಕ್ಕುಳಿದ (ಪರಸ್ಥಳೀಯ) ವೃಂದದ ಹುದ್ದೆಯನ್ನು ಆಯ್ಕೆ ಮಾಡಿಕೊಂಡು ನೇಮಕಾತಿ ಹೊಂದಿದಲ್ಲಿ ಅಂತಹ ಅಭ್ಯರ್ಥಿಯು ಜಾರಿಯಲ್ಲಿರುವ ನಿಯಮದಂತೆ ತನ್ನ ಸೇವಾ ಅವಧಿಯಲ್ಲಿ ಅನುಚ್ಛೇದ 371ಜೆ ಮೀಸಲಾತಿ ಸೌಲಭ್ಯಗಳನ್ನು ಪಡೆಯಲು ಅವಕಾಶವಿರುವುದಿಲ್ಲ ಎಂಬುದನ್ನು ಸ್ಪಷ್ಟೀಕರಿಸಲಾಗಿದೆ.

ಸಿ) ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕವು ಮುಕ್ತಾಯವಾದ ನಂತರ 10 ದಿನಗಳ ಕಾಲಾವಕಾಶ ನೀಡಲಾಗುತ್ತಿದ್ದು, ಸದರಿ ದಿನಾಂಕದೊಳಗಾಗಿ ಅಭ್ಯರ್ಥಿಯು ತಾನು ಸಲ್ಲಿಸಿರುವ ಅರ್ಜಿಯಲ್ಲಿ ಹೆಸರು, ಜನ್ಮ ದಿನಾಂಕ, ಕೋರಿರುವ ಮೀಸಲಾತಿ ಹಾಗೂ ಇತರೆ ಯಾವುದೇ ಅಂಶಗಳ ಬದಲಾವಣೆ ಮಾಡಬೇಕಾದಲ್ಲಿ ಖುದ್ದಾಗಿ / ಅಂಚೆ ಮೂಲಕ ಸಂಬಂಧಪಟ್ಟ ದೃಢೀಕೃತ ದಾಖಲೆಗಳೊಂದಿಗೆ ಅಡಿಷನಲ್ ಡೈರೆಕ್ಟರ್ ಜನರಲ್ ಆಫ್ ಪೊಲೀಸ್, ನೇಮಕಾತಿ ಕಾರ್ಲಟನ್ ಭವನ, ಅರಮನೆ ರಸ್ತೆ, ಬೆಂಗಳೂರು ರವರ ಕಛೇರಿಗೆ ಸಲ್ಲಿಸತಕ್ಕದ್ದು. ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಸಲ್ಲಿಸುವ ಯಾವುದೇ ಮನವಿಗಳನ್ನು ಪರಿಗಣಿಸಲಾಗುವುದಿಲ್ಲ.

2. ಶುಲ್ಕ:

| | |
|---|---|
| ಸಾಮಾನ್ಯ ವರ್ಗ, ಪ್ರವರ್ಗ 2(ಎ), 2(ಬಿ), 3(ಎ), 3(ಬಿ) ಗೆ ಸೇರಿದ ಅಭ್ಯರ್ಥಿಗಳಿಗೆ | ₹. 500/- |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1ಕ್ಕೆ ಸೇರಿದ ಅಭ್ಯರ್ಥಿಗಳಿಗೆ | ₹. 250/- |